# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 84 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 09–10–2023 ಸೋಮವಾರ | ಪುಟ: 4 | ಬೆಲೆ : ರೂ.2–00
Volume - 01 Issue - 84 | Title- Code: KARKAN 28269 | Chitradurga | Date: 09-10-2023 Monday | Page: 4 | Price: Rs. 2-00



ಒಳಪುಟದ ಸುದ್ದಿಗಳು
ದಾವಣಗೆರೆ ಜಿಲ್ಲೆಗೆ ಬರ ಅಧ್ಯಯನ ಕೇಂದ್ರ ತಂಡ ಭೇಟಿ, ಪರಿಶೀಲನೆ 2
ಕೇಂದ್ರ ತಂಡಕ್ಕೆ ಭೀಕರ ಬರ ಪರಿಸ್ಥಿತಿ ಮನವರಿಕೆ ಮಾಡಿಕೊಟ್ಟ ಚಿತ್ರದುರ್ಗ ಜಿಲ್ಲಾಡಳಿತ 3
ರಾಜವೀರ ಮದಕರಿ ನಾಯಕರ ಹೊಸ ಭಾವಚಿತ್ರ ಲೋಕಾರ್ಪಣೆ ಮಾಡಿದ ಸುದೀಪ್ 4



ಸುದ್ದಿ, ಜಾಹಿರಾತಿಗೆ 9686622252


### ಜನಸಾಗರದ ನಡುವೆ ಹಿಂದೂ ಮಹಾಗಣಪತಿಯ ಬೃಹತ್ ವಿಸರ್ಜನಾ ಮೆರವಣಿಗೆ

# ಕೇಸರಿಮಯವಾದ ಕೋಟೆನಾಡು

» **ಚಿತ್ರದುರ್ಗ**

ಕೋಟೆನಾಡು ಚಿತ್ರದುರ್ಗದಲ್ಲಿ ಹಿಂದೂ ಮಹಾಗಣಪತಿಯ ಬೃಹತ್ ವಿಸರ್ಜನಾ ಶೋಭಾಯಾತ್ರೆ ಮೆರವಣಿಗೆ ಬಹಳ ಅದ್ದೂರಿಯಾಗಿ ನಡೆಯಿತು.

ನಗರದ ಪಂಚಾಚಾರ್ಯ ಕಲ್ಯಾಣ ಮಂಟಪದ ಬಳಿಯಲ್ಲಿ ವಿಶ್ವ ಹಿಂದೂ ಪರಿಷತ್ ಹಾಗೂ ಭಜರಂಗದಳದ ವತಿಯಿಂದ ಗಣಪತಿಯನ್ನು ಪ್ರತಿಷ್ಠಾಪಿಸಿದ್ದರು.ಗಣಪತಿ ಪ್ರತಿಷ್ಠಾಪಿಸಿ 21ದಿನಗಳ ವಿವಿಧ ಧಾರ್ಮಿಕ ಪೂಜಾ ಕಾರ್ಯಕ್ರಮಗಳು ನೆರವೇರಿಸಲಾಯಿತು. ಹಿಂದೂ ಮಹಾಗಣಪತಿ ವಿಸರ್ಜನಾ ಬೃಹತ್ ಶೋಭಾಯಾತ್ರೆಯ ಮೆರವಣಿಗೆಗೆ ವಿವಿಧ ಮಠಾಧೀಶರು, ಕೇಂದ್ರ ಸಚಿವ ಎ.ನಾರಾಯಣಸ್ವಾಮಿ ಅವರು ಚಾಲನೆ ನೀಡಿದರು.

ಭಾನುವಾರ ಬೆಳಗ್ಗೆ 11–30 ಗಂಟೆಗೆ ವೇದಿಕೆ ಕಾರ್ಯಕ್ರಮ ಮುಗಿದ ನಂತರ ವಿಜ್ಞಾನ ಕಾಲೇಜು ಮುಂಭಾಗದಿಂದ ಶುರುವಾದ ಗಣಪತಿ ವಿಸರ್ಜನಾ ಶೋಭಾಯಾತ್ರೆ ಮೂರು ಕಿಲೋಮೀಟರ್ ಸಾಗಿ ಚಂದ್ರವಳ್ಳಿ ಕೆರೆಯಲ್ಲಿ ವಿಸರ್ಜನೆಗೊಂಡಿತು. ಈ ಮೆರವಣಿಗೆಗೆ ಸಹಸ್ರ ಸಹಸ್ರ ಸಂಖ್ಯೆಯಲ್ಲಿ ಜನ ಆಗಮಿಸಿದ್ದರು.

ಬೆಳಗ್ಗೆ 11 –30 ಗಂಟೆಯಿಂದ ಯುವಕ ಯುವತಿಯರು ಆಗಮಿಸುವ ಮೂಲಕ ಬಿಸಿಲನ್ನು ಲೆಕ್ಕಿಸದೆ ಮೆರವಣಿಗೆಯಲ್ಲಿ ಹೆಜ್ಜೆ ಹಾಕಿದ್ದು ಕಂಡು ಬಂದಿತ್ತು. ಪ್ರತಿಷ್ಠಾಪನ ಸ್ಥಳದಿಂದ ಗಣಪತಿ ಮೆರವಣಿಗೆ ಹೊರಟು ಮದಕರಿನಾಯಕನ ವೃತ್ತ, ಅಂಬೇಡ್ಕರ್ ವೃತ್ತ, ಗಾಂಧಿ ವೃತ್ತ, ಸಂಗೊಳ್ಳಿ ರಾಯಣ್ಣ ವೃತ್ತ ಹಾಗೂ ಕನಕ ವೃತ್ತದ ಮೂಲಕ ಶೋಭಾಯಾತ್ರೆ ಸಾಗಿತು. ಈ ಮೆರವಣಿಗೆಯಲ್ಲಿ ವಾದ್ಯ ಗೋಷ್ಠಿ, ತಮಟೆ, ಡೋಲು, ಗೊಂಬೆ ಕುಣಿತ, ವೀರಗಾಸೆ ಈಗೆ ವಿವಿಧ ಸಾಂಸ್ಕೃತಿಕ ಕಲಾತಂಡಗಳು ಮೆರುಗು ತಂದವು.

ಲಕ್ಷಾಂತರ ಜನರು ಸಾಗರೋಪಾದಿಯಲ್ಲಿ ಜನರು ಕಿಕ್ಕಿರಿದು ಮೆರವಣಿಗೆಯಲ್ಲಿ ಸೇರಿದ್ದರು. ಪ್ರವಾಸಿ ಮಂದಿರದಿಂದ ಮೆರವಣಿಗೆ ಮುಂದೆ ಬರುತ್ತಿದ್ದಂತೆ ಕಟ್ಟಡಗಳ ಮೇಲಿದ್ದ ಜನರ ಸಂಭ್ರಮ ಮುಗಿಲು ಮುಟ್ಟಿತ್ತು. ಎತ್ತ ತಿರುಗಿದರು ಸಹ ಜನವೋ, ಜನ. ಗಣಪತಿ ಮೆರವಣಿಗೆ ದೇಶದಲ್ಲೇ ಎರಡನೇ ಸ್ಥಾನ ಪಡೆದಿದೆ.

**ಶೋಭಾಯಾತ್ರೆಯಲ್ಲಿ ಪೊಲೀಸ್ ಬಿಗಿ ಭದ್ರತೆ:** ಯುವಕ, ಯುವತಿಯರು, ಮಕ್ಕಳು, ಹಿರಿಯರು ಹೀಗೆ ಎಲ್ಲರೂ ಭವ್ಯ ಮೆರವಣಿಗೆಗೆ ಸಾಕ್ಷಿಯಾದರು. ರಸ್ತೆಯುದ್ದಕ್ಕೂ ಪೊಲೀಸರು ಬಿಗಿ ಬಂದೋಬಸ್ತ್ ಕಲ್ಪಿಸಿದ್ದರು. ಭದ್ರತೆಗಾಗಿ ಜಿಲ್ಲೆಯ ವರಿಷ್ಠಾಧಿಕಾರಿ ಸೇರಿದಂತೆ 4 ಹೆಚ್ಚುವರಿ ಎಸ್ಪಿಗಳು, 16 ಡಿವೈಎಸ್ಪಿ, 40 ಸಿಪಿಐ, 110 ಪಿಎಸ್ಐ ಸೇರಿದಂತೆ 2800 ಪೊಲೀಸ್ ಸಿಬ್ಬಂದಿಗಳನ್ನು ನಿಯೋಜನೆ ಮಾಡಲಾಗಿತ್ತು. ನಗರದದ್ಯಾಂತ 60 ವೀಡಿಯೋ ಕ್ಯಾಮರಾ, ಪ್ರಮುಖ 100 ಸ್ಥಳಗಳಲ್ಲಿ ಸಿಸಿಟಿವಿ, 29 ಭಾಗಗಳಲ್ಲಿ ಕಣ್ಗಾವಲು ವೇದಿಕೆಗಳನ್ನು ನಿರ್ಮಿಸಲಾಗಿತ್ತು.

ಒಟ್ಟಾರೆಯಾಗಿ ಶೋಭಾಯಾತ್ರೆಯಲ್ಲಿ ಯಾವುದೇ ಅಹಿತಕರ ಘಟನೆ ನಡೆಯದಂತೆ ಮೆರವಣಿಗೆಯಲ್ಲಿ ಪೊಲೀಸರು ಹದ್ದಿನ ಕಣ್ಣಿಟ್ಟಿದ್ದರು. ಜೊತೆಗೆ ಭಜರಂಗದಳ ಹಾಗೂ ವಿಶ್ವ ಹಿಂದೂ ಪರಿಷತ್ ನೇತೃತ್ವದ ತಂಡ ಸಹ ಎಲ್ಲಿಯೂ ಸಮಸ್ಯೆ ಆಗದಂತೆ ಎಚ್ಚರವಹಿಸಿದ್ದರು. ಇನ್ನು ಒಳ ಬರುವ ಪ್ರಮುಖ ರಸ್ತೆಗಳನ್ನು ತಾತ್ಕಾಲಿಕವಾಗಿ ಬಂಬುಗಳಿಂದ ಬ್ಯಾರಿಕೇಡ್ ಹಾಕಿ ಬಂದ್ ಮಾಡಲಾಗಿತ್ತು. ನಗರದ ವಿವಿಧ ಭಾಗಗಳಲ್ಲಿ ವಾಚಿಂಗ್ ಟವರ್ ನಿರ್ಮಾಣ ಮಾಡಿದ್ದರು.

**ಕೇಸರಿಮಯವಾದ ದುರ್ಗ:** ಗಣೇಶನ ಬೃಹತ್ ಶೋಭಾಯಾತ್ರೆಗೆ ಚಿತ್ರದುರ್ಗ ನಗರ ಕೇಸರಿ ಬಣ್ಣದ ಮಾಯಾವಾಗಿತ್ತು. ನಗರದಲ್ಲಿ ಎತ್ತಾ ನೋಡಿ ಕಣ್ಣಾಡಿಸಿದರೂ ಕೇಸರಿ ಬಾವುಟ ಹಾರಾಟ ರಾರಾಜಿಸುತ್ತಿದ್ದವು. ನಗರದ ವೃತ್ತಗಳಿಗೆ ಬಣ್ಣ, ಬಣ್ಣದ ಅಲಂಕಾರ ಮಾಡಿದ್ದು ಎಲ್ಲರ ಗಮನ ಸೆಳೆಯಿತು. ಮದಕರಿನಾಯಕ ವೃತ್ತ, ಗಾಂಧಿ ವೃತ್ತ, ಸಂಗೊಳ್ಳಿ ರಾಯಣ್ಣ, ಕನಕ ಸರ್ಕಲ್ ಸೇರಿದಂತೆ ಮತ್ತಿತರರ ವೃತ್ತಗಳಿಗೆ ಅಲಂಕಾರ ಕಣ್ಮನ ಸೆಳೆಯುತ್ತಿವು.

ರಾಜ್ಯದಲ್ಲಿಯೇ ಜನಪ್ರಿಯತೆ ಪಡೆದಿರುವ ಚಿತ್ರದುರ್ಗದ ಹಿಂದೂ ಮಹಾಗಣಪತಿ ವಿಸರ್ಜನಾ ಶೋಭಾಯಾತ್ರೆಗೆ ದಾವಣಗೆರೆ, ಬಳ್ಳಾರಿ, ತುಮಕೂರು, ಬೆಂಗಳೂರು, ಶಿವಮೊಗ್ಗ, ಚಿಕ್ಕಮಗಳೂರು ಸೇರಿದಂತೆ ನಾನಾ ಜಿಲ್ಲೆಗಳು ಹಾಗೂ ಹೊರ ರಾಜ್ಯಗಳಿಂದಲೂ ಭಕ್ತರು ಆಗಮಿಸಿ ಹಿಂದೂ ಮಹಾಗಣಪತಿ ಆಶೀರ್ವಾದ ಪಡೆಯುವ ಮೂಲಕ ಭಕ್ತಿ ಸಮರ್ಪಣೆ ಮಾಡಿದರು.



## ಮುಕ್ತಿ ಬಾವುಟ ಪಡೆದ ಶಾಸಕ ಕೆ.ಸಿ.ವೀರೇಂದ್ರ


» **ಚಿತ್ರದುರ್ಗ**

ಕೋಟೆ ನಾಡು ಚಿತ್ರದುರ್ಗದಲ್ಲಿ ವಿಶ್ವ ಹಿಂದೂ ಪರಿಷತ್ ಮತ್ತು ಭಜರಂಗದಳದಿಂದ ಪ್ರತಿಷ್ಠಾಪಿಸಿರುವ ಹಿಂದೂ ಮಹಾಗಣಪತಿ ಮಹೋತ್ಸವದ ಶೋಭಾಯಾತ್ರೆಯಲ್ಲಿ ಯುವಕ ಯುವತಿಯರು ಸಮೂಹ ಕುಣಿದು ಕುಪ್ಪಳಿಸಿತು.

ನಗರದ ಬಿ.ಡಿ.ರಸ್ತೆಯ ಜೈನಧಾಮದ ಶಿವಶಕ್ತಿ ಮಂಟಪದ ಆವರಣದಲ್ಲಿ ಶೋಭಾಯಾತ್ರೆಗೆ ಚಾಲನೆ ನೀಡುತ್ತಿದ್ದಂತೆ ಹರ್ಷೋದ್ಗಾರ ಮುಗಿಲು ಮುಟ್ಟಿತು. ಕೇಸರಿ ಭಾವುಟಗಳು ಕೇಸರಿ ಅಲೆಯನ್ನೇ ಸೃಷ್ಟಿಸಿದವು. ಆದಿಶೇಷನ ಸಿಂಹಾಸನದ ಮೇಲೆ ಒಂದು ಕೈಯಲ್ಲಿ ಪಾಂಚಜನ್ಯ, ಇನ್ನೊಂದು ಕೈಯಲ್ಲಿ ಸುದರ್ಶನ ಚಕ್ರ ಹಿಡಿದು ಭಕ್ತರಿಗೆ ಅಭಯ ನೀಡುತ್ತಿರುವ ಹಿಂದೂ ಮಹಾಗಣಪತಿಯ ಮುಕ್ತಿ ಬಾವುಟವನ್ನು ಶಾಸಕ ಕೆ.ಸಿ.ವೀರೇಂದ್ರ 1.51 ಲಕ್ಷಕ್ಕೆ ಹರಾಜಿನಲ್ಲಿ ತಮ್ಮದಾಗಿಸಿಕೊಂಡರು.




ಗಣಪತಿಯ ಹೂವಿನ ಹಾರವನ್ನು 41 ಸಾವಿರಕ್ಕೆ ಶಿವಾನಂದ, ಸೋಮನಾಥ ಮಂದಿರದ ಮಾದರಿಯನ್ನು 95ಸಾವಿರಕ್ಕೆ ಮಂಜುನಾಥ್, ರಾಮ ಮಂದಿರ ಮಾದರಿ ಮಾದರಿಯನ್ನು 1.5 ಲಕ್ಷಕ್ಕೆ ಡಿಎಸ್ಐ ಮಂಜುನಾಥ್, ಅಂತರರಾಷ್ಟ್ರೀಯ ಚಿತ್ರ ಕಲಾವಿದ ವಿಲಾಸ್ ನಾಯಕ್ ಬರೆದಿರುವ ಗಣಪತಿ ಚಿತ್ರವನ್ನು ಬೆಸ್ಟ್ ಸ್ಟುಡಿಯೋದ ಧರ್ಮ □ 51 ಸಾವಿರಕ್ಕೆ ಹಣ್ಣಿನ ಗುನ್ನು ಕಾರ್ತಿಕ್ ಬಿವಿಕೆಎಸ್ 25 ಸಾವಿರಕ್ಕೆ ಹಾಗೂ ದ್ರಾಕ್ಷಿಯ ಹಾರವನ್ನು ಓಂಕಾರಮೂರ್ತಿ 35 ಸಾವಿರಕ್ಕೆ ಪಡೆದು ವಿಘ್ನೇಶ್ವರನ ಕೃಪೆಗೆ ಪಾತ್ರರಾದರು.



## ಉದಯನಿಧಿ ಬೊಗಳಲು ಆರಂಭಿಸಿದ್ದಾರೆ: ಕಾಡಸಿದ್ದೇಶ್ವರ ಸ್ವಾಮೀಜಿ

» **ಚಿತ್ರದುರ್ಗ**

ಕ್ರಿಶ್ಚಿಯನ್ ಏಜೆಂಟ್ ಆಗಿದ್ದ ಪೆರಿಯಾರ್ ರಾಮಸ್ವಾಮಿ ಅವರಿಂದ ಹಿಂದೂ ಧರ್ಮ ಅಲುಗಾಡಿಸಲು ಸಾಧ್ಯವಾಗಲಿಲ್ಲ. ಇವರಿಂದ ಪ್ರೇರಣೆಗೊಂಡು ಉದಯನಿಧಿ ಸ್ಟಾಲಿನ್ ಬೊಗಳಲು ಆರಂಭಿಸಿದ್ದಾರೆ. ಇದರಿಂದ ಹಿಂದೂ ಧರ್ಮ ಇನ್ನಷ್ಟು ಗಟ್ಟಿಯಾಗಲಿದೆಯೇ ಹೊರತು ಹಾಳಾಗದು ಎಂದು ಕೊಲ್ಲಾಪುರದ ಕನ್ನೇರಿ ಮಠದ ಕಾಡಸಿದ್ದೇಶ್ವರ ಸ್ವಾಮೀಜಿ ಕಿಡಿಕಾರಿದರು.

ಇಲ್ಲಿನ ಜೈನಧಾಮದಲ್ಲಿ ಬಜರಂಗದಳ ಮತ್ತು ವಿಶ್ವ ಹಿಂದೂ ಪರಿಷತ್ ಪ್ರತಿಷ್ಠಾಪಿಸಿದ ಹಿಂದೂ ಮಹಾಗಣಪತಿ ಶೋಭಾಯಾತ್ರೆಗೆ ಭಾನುವಾರ ಚಾಲನೆ ನೀಡಿ ಅವರು ಮಾತನಾಡಿದರು.




ತಮಿಳುನಾಡಿನ ಹುಡುಗ ಉದಯನಿಧಿ ಸ್ಟಾಲಿನ್ ಹಿಂದೂ ಧರ್ಮದ ಬಗ್ಗೆ ಬೊಗಳಿದ್ದಾರೆ. ಇದರಿಂದ ಹಿಂದೂ ಧರ್ಮಕ್ಕೆ ಯಾವುದೇ ಧಕ್ಕೆ ಉಂಟಾಗುವುದಿಲ್ಲ. ಹಿಂದೂ ಧರ್ಮದಲ್ಲಿ ಹುಟ್ಟಿ ಹಿಂದೂ ಧರ್ಮದ ವಿರುದ್ಧವೇ ಮಾತನಾಡುತ್ತಿರುವವರಿಗೆ ಗಣೇಶ ಸದ್ಬುದ್ದಿ ಕೊಡಲಿ ಎಂದರು.

’ದೇಶದಲ್ಲಿ 80 ರಿಂದ 90 ಕೋಟಿ ಹಿಂದೂಗಳು ಇದ್ದೇವೆ. ಹೀನ ಭಾವನೆ ಹೊಂದದೇ ಎಲ್ಲರೊಂದಿಗೆ ಬದುಕುವ ಮನೋಭಾವ ಹೊಂದಿದ್ದೇವೆ. ಸನಾತನ ಧರ್ಮ ವಿಶಿಷ್ಟವಾಗಿದ್ದು. ವೈಜ್ಞಾನಿಕ ವಿಚಾರಗಳನ್ನು ಪಾಲನೆ ಮಾಡುತ್ತದೆ. ಜಾತಿ, ಪಂಥ ನಿರಪೇಕ್ಷತೆ ಸನಾತನ ಧರ್ಮದಲ್ಲಿದೆ. ಇಷ್ಟವಾದ ದೇವರನ್ನು ಪೂಜಿಸುವ ಸ್ವಾತಂತ್ರ್ಯ ಎಲ್ಲರಿಗೂ ಇದೆ’ ಎಂದು ಹೇಳಿದರು.

’ಬಾಲ ಗಂಗಾಧರನಾಥ ತಿಲಕರು ಗಣಪತಿ ಆರಾಧನೆ ಶುರು ಮಾಡಿದರು. ಮಹಾರಾಷ್ಟ್ರ ಮೀರಿಸುವ ರೀತಿಯಲ್ಲಿ ಗಣೇಶ ಉತ್ಸವ ಕರ್ನಾಟಕದಲ್ಲಿ ನಡೆಯುತ್ತಿದೆ. ಇದು ಇನ್ನಷ್ಟು ಉತ್ಸವ ಕರ್ನಾಟಕದಲ್ಲಿ ನಡೆಯುತ್ತಿದೆ. ಇದು ಇನ್ನಷ್ಟು ಅದ್ದೂರಿಯಾಗಿ ನಡೆಯಲಿ’ ಎಂದು ಹಾರೈಸಿದರು.

ಮಾದಾರ ಚನ್ನಯ್ಯ ಗುರುಪೀಠದ ಬಸವಮೂರ್ತಿ ಮಾದಾರ ಚನ್ನಯ್ಯ ಸ್ವಾಮೀಜಿ, ಕಬೀರಾನಂದ ಆಶ್ರಮದ ಶಿವಲಿಂಗಾನಂದ ಸ್ವಾಮೀಜಿ, ಭಗೀರಥ ಗುರುಪೀಠದ ಪುರುಷೋತ್ತಮಾನಂದಪುರಿ ಸ್ವಾಮೀಜಿ, ಬಂಜಾರ ಗುರುಪೀಠದ ಸರ್ದಾರ್ ಸೇವಾಲಾಲ್ ಸ್ವಾಮೀಜಿ, ಇಮ್ಮಡಿ ಕೇತೇಶ್ವರ ಸ್ವಾಮೀಜಿ, ಕೇಂದ್ರ ಸಚಿವ ಎ.ನಾರಾಯಣಸ್ವಾಮಿ, ಶಾಸಕ ಕೆ.ಸಿ.ವೀರೇಂದ್ರ, ವಿಧಾನಪರಿಷತ್ ಸದಸ್ಯ ಕೆ.ಎಸ್.ನವೀನ್,ಮಾಜಿಜಿಲ್ಲಾಪಂಚಾಯತ ಅಧ್ಯಕ್ಷೆ ಸೌಭಾಗ್ಯ ಬಸವರಾಜನ್, ಉತ್ಸವ ಸಮಿತಿ ಗೌರವಾಧ್ಯಕ್ಷ ಷಡಾಕ್ಷರಪ್ಪ, ಅಧ್ಯಕ್ಷ ಜಿ.ಎಂ.ಸುರೇಶ್, ಟಿ.ಬದರಿನಾಥ್, ಬಜರಂಗದಳ ಮುಖಂಡ ಪ್ರಭಂಜನ್ ಇದ್ದರು.

## ಫಾಸ್ಟ್ ನ್ಯೂಸ್

### ಅರ್ಜಿ ಆಹ್ವಾನ

» ಚಿತ್ರದುರ್ಗ

ನಾಯಕನಹಟ್ಟಿ ಪಟ್ಟಣ ಪಂಚಾಯಿತಿಯ ವ್ಯಾಪ್ತಿಯಲ್ಲಿ ಕೇಂದ್ರ ಸರ್ಕಾರದ ಯೋಜನೆ ಪ್ರಧಾನಮಂತ್ರಿ ಬೀದಿ ಬದಿ ವ್ಯಾಪಾರಿಗಳ ಆತ್ಮ ನಿರ್ಭರ್ ನಿಧಿಯ ಕಿರು ಸಾಲ ಸೌಲಭ್ಯಕ್ಕೆ ಅರ್ಜಿ ಆಹ್ವಾನಿಸಲಾಗಿದೆ.ದೋಬಿ, ಇಸ್ತ್ರಿ ಸೇವೆ, ಹಳೆ ಪಾತ್ರೆಗಳ ವ್ಯಾಪಾರ, ಬಡಗಿ, ಬಿದಿರಿನ ಬುಟ್ಟಿ, ಬೊಂಬು, ಏಣಿ ವ್ಯಾಪಾರ, ಹೂವಿನ ಕುಂಡಗಳ ವ್ಯಾಪಾರ, ಮಡಿಕೆ ವ್ಯಾಪಾರ, ಆಹಾರ ತಯಾರಿಸಿ ಮಾರಾಟ ಮಾಡುವವರು(ಕ್ಯಾಟರಿಂಗ್), ದಿನ ಪತ್ರಿಕೆ ಹಂಚಿಕೆ ಮತ್ತು ಹಾಲು ಮಾರಾಟ ಮಾಡುವವರು ಪಿಎಂ-ಸ್ವಾನಿಧಿ ಯೋಜನೆಯಡಿ ದೊರೆಯುವ ಸಾಲ ಸೌಲಭ್ಯಕ್ಕಾಗಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ. ಆಸಕ್ತರು, ರೇಷನ್ ಕಾರ್ಡ್, ಆಧಾರ ಕಾರ್ಡ್, ಚುನಾವಣಾ ಗುರುತಿನ ಚೀಟಿ, ವೈಯಕ್ತಿಕ ಉಳಿತಾಯದ ಬ್ಯಾಂಕ್ ಪಾಸ್ ಪುಸ್ತಕದ ಪ್ರತಿ, ವ್ಯಾಪಾರ ಮಾಡುತ್ತಿರುವ ಸ್ಥಳದ ಫೋಟೋ, ಪಾಸ್ ಪೋರ್ಟ್ ಸೈಜ್ ಫೋಟೋ-2, ಜಾತಿ ಮತ್ತು ಆದಾಯ ಪ್ರಮಾಣ ಪತ್ರ ದಾಖಲೆಗಳೊಂದಿಗೆ ನಾಯಕನಹಟ್ಟಿ ಪಟ್ಟಣ ಪಂಚಾಯಿತಿ ಕಾರ್ಯಾಲಯದ ಡೇ-ನಲ್ಮ್ ಶಾಖೆಯ ವಿಷಯ ನಿರ್ವಾಹಕರನ್ನು ಸಂಪರ್ಕಿಸಬಹುದು ಎಂದು ನಾಯಕನಹಟ್ಟಿ ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ತಿಳಿಸಿದ್ದಾರೆ.

### ವಿದ್ಯಾರ್ಥಿವೇತನ: ಅರ್ಜಿ ಆಹ್ವಾನ

» ಚಿತ್ರದುರ್ಗ

2023-24ನೇ ಸಾಲಿನ ರಾಜ್ಯ ವಿದ್ಯಾರ್ಥಿ ವೇತನ ತಂತ್ರಾಂಶದಲ್ಲಿ (ಎಸ್‌ಎಸ್‌ಪಿ ಪೋರ್ಟಲ್) ಮೆಟ್ರಿಕ್ ನಂತರ ವಿದ್ಯಾರ್ಥಿವೇತನಕ್ಕೆ ಅರ್ಜಿ ಆಹ್ವಾನಿಸಲಾಗಿದೆ.ಜಿಲ್ಲೆಯ ವ್ಯಾಪ್ತಿಯಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಅರ್ಹ ವಿಕಲಚೇತನ ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿರುವ ಕಾಲೇಜು, ಶಿಕ್ಷಣ ಸಂಸ್ಥೆಗಳ ಮುಖಾಂತರ ಆನ್‌ಲೈನ್ ಮೂಲಕ ವೆಬ್‌ಸೈಟ್ https://ssp.postmatric.karnata.gov.in ನಲ್ಲಿ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಿದ ಒಂದು ಪ್ರತಿಯನ್ನು ಆಯಾ ತಾಲ್ಲೂಕು ಪಂಚಾಯಿತಿ ಕಾರ್ಯ ನಿರ್ವಹಿಸುತ್ತಿರುವ ವಿವಿಧೊದ್ದೇಶ ಪುನರ್ವಸತಿ ಕಾರ್ಯಕರ್ತರು ಅಥವಾ ಗ್ರಾಮ ಪಂಚಾಯತಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರಿಗೆ ಸಲ್ಲಿಸಬೇಕು.ಹೆಚ್ಚಿನ ಮಾಹಿತಿಗಾಗಿ, ತಾಲ್ಲೂಕು ಪಂಚಾಯಿತಿ ಕಚೇರಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧೊದ್ದೇಶ ಪುನರ್ವಸತಿ ಕಾರ್ಯಕರ್ತರ ದೂರವಾಣಿ ಸಂಖ್ಯೆ ಚಿತ್ರದುರ್ಗ-9880821934, ಚಳ್ಳಕೆರೆ-9611266930, ಹಿರಿಯೂರು-9902888901, 9902898901, ಹೊಳಲ್ಕೆರೆ-9740030227, ಹೊಸದುರ್ಗ-9741829990, ಮೊಳಕಾಲ್ಮೂರು-9742725576, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಚೇರಿಯ ದೂರವಾಣಿ ಸಂಖ್ಯೆ 08194-235284 ಗೆ ಸಂಪರ್ಕಿಸಬಹುದು.

### ಅಲೆಮಾರಿ/ಅರೆ ಅಲೆಮಾರಿ ಅಭಿವೃದ್ಧಿ ನಿಗಮದಿಂದ ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನ

» ದಾವಣಗೆರೆ

ಕರ್ನಾಟಕ ಅಲೆಮಾರಿ/ಅರೆ ಅಲೆಮಾರಿ ಅಭಿವೃದ್ಧಿ ನಿಗಮದ ವತಿಯಿಂದ ಪ್ರಸಕ್ತ ಸಾಲಿನಲ್ಲಿ ವಿವಿಧ ಯೋಜನೆಗಳಿಗೆ ಸಾಲ ಮತ್ತು ಸಹಾಯಧನ ಯೋಜನೆಗಳಿಗೆ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ನವಂಬರ್ 3 ಕೊನೆಯ ದಿನವಾಗಿರುತ್ತದೆ. ಹೆಚ್ಚಿನ ಮಾಹಿತಿಯನ್ನು ನಿಗಮದ ವೆಬ್‌ಸೈಟ್ https://kaad.karnataka.gov.in ಅಥವಾ ಜಿಲ್ಲಾ ವ್ಯವಸ್ಥಾಪಕರು ಕರ್ನಾಟಕ ಅಲೆಮಾರಿ, ಅರೆ ಅಲೆಮಾರಿ ಅಭಿವೃದ್ಧಿ ನಿಗಮ ನಿಯಮಿತ ದಾವಣಗೆರೆ ದೂ.ಸಂ 08192-230934 ಸಂಪರ್ಕಿಸಬಹುದು. ಎಂದು ನಿಗಮದ ಜಿಲ್ಲಾ ವ್ಯವಸ್ಥಾಪಕರಾದ ಸಾತ್ವಿಕ್ ತಿಳಿಸಿದ್ದಾರೆ.

### ಕೃಷಿ ಸಿಂಚಾಯಿ ಯೋಜನೆಗೆ ರೈತರಿಂದ ಅರ್ಜಿ ಆಹ್ವಾನ

» ದಾವಣಗೆರೆ

ಪ್ರಸಕ್ತ ಸಾಲಿನಲ್ಲಿ ತೋಟಗಾರಿಕೆ ಇಲಾಖೆಯಿಂದ ವತಿಯಿಂದ ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಗೆ ದಾವಣಗೆರೆ ಜಿಲ್ಲೆಯ ರೈತರುಗಳಿಂದ ಸಹಾಯಧನಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ರೈತರು ಅರ್ಜಿಗಳನ್ನು ಸಂಬಂಧಪಟ್ಟ ತಾಲ್ಲೂಕಿನ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು, (ಜಿಪಂ), ಕಚೇರಿ, ಸಹಾಯಕ ತೋಟಗಾರಿಕೆ ಅಧಿಕಾರಿಗಳು, ರೈತ ಸಂಪರ್ಕ ಕಛೇರಿಗಳಿಗೆ ಅ.31 ರೊಳಗಾಗಿ ಕಚೇರಿಗೆ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಸಂಬಂಧಪಟ್ಟ ಹೋಬಳಿಯ ಸಂಪರ್ಕ ಕೇಂದ್ರಗಳ ಸಹಾಯಕ ತೋಟಗಾರಿಕೆ ಅಧಿಕಾರಿಗಳು ಹಾಗೂ ಸಂಬಂಧಪಟ್ಟ ತಾಲ್ಲೂಕಿನ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು, ದಾವಣಗೆರೆ, ಚನ್ನಗಿರಿ, ಹೊನ್ನಾಳಿ, ಹರಿಹರ ಮತ್ತು ಜಗಳೂರು ಇವರನ್ನು ಸಂಪರ್ಕಿಸಲು ರಾಘವೇಂದ್ರ ಪ್ರಸಾದ್ ತಿಳಿಸಿದ್ದಾರೆ.

---

### ರೈತರ ಜಮೀನಿನಲ್ಲಿ ಅಧಿಕಾರಿಗಳಿಂದ ಬರ ವೀಕ್ಷಣೆ

# ದಾವಣಗೆರೆ: ಬರ ಅಧ್ಯಯನ ಕೇಂದ್ರ ತಂಡ

» ದಾವಣಗೆರೆ

ಮುಂಗಾರು ಮಳೆ ಕೊರತೆಯಿಂದ ಉಂಟಾಗಿ ರುವ ಬರ ಪರಿಸ್ಥಿತಿ ಪರಿಶೀಲಿಸಲು ಕೇಂದ್ರ ಬರ ಅಧ್ಯಯನ ತಂಡ ಶನಿವಾರ ಜಗಳೂರು ತಾಲ್ಲೂಕಿನ ದೊಣ್ಣೆಹಳ್ಳಿಗೆ ಭೇಟಿ ನೀಡಿತು.

ಕೇಂದ್ರ ಜಲಶಕ್ತಿ ಆಯೋಗದ ನಿರ್ದೇಶಕ ವಿ.ಅಶೋಕ್ ಕುಮಾರ್, ಎಂ.ಎನ್.ಸಿ.ಎಫ್.ಸಿ ಉಪನಿರ್ದೇಶಕ ಕರಣ್ ಚೌಧರಿ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಉಪಕಾರ್ಯದರ್ಶಿ ಸಂಗೀತ್ ಕುಮಾರ್ ಹಾಗೂ ರಾಜ್ಯ ಪ್ರಕೃತಿ ವಿಕೋಪ ನಿರ್ವಹಣಾ ಕೇಂದ್ರದ ಹಿರಿಯ ಸಲಹೆಗಾರ ಡಾ. ಶ್ರೀನಿವಾಸ ರೆಡ್ಡಿ ಅವರನ್ನು ಒಳಗೊಂಡ ಕೇಂದ್ರ ಬರ ಅಧ್ಯಯನ ತಂಡವನ್ನು ಜಿಲ್ಲಾಧಿಕಾರಿ ಡಾ.ಎಂ.ವಿ.ವೆಂಕಟೇಶ್ ಹಾಗೂ ಜಿಲ್ಲಾ ಪಂಚಾಯಿತಿ ಸಿಇಒ ಸುರೇಶ್ ಬಿ. ಇಟ್ನಾಳ್ ಅವರು ಸ್ವಾಗತಿಸಿದರು.

ಕೇಂದ್ರ ಜಲಶಕ್ತಿ ಆಯೋಗದ ನಿರ್ದೇಶಕ ವಿ.ಅಶೋಕ್ ಕುಮಾರ್ ನೇತೃತ್ವದ ತಂಡವು ಜಗಳೂರು ತಾಲ್ಲೂಕಿನ ವಿವಿಧೆಡೆ ರೈತರ ಜಮೀನುಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿ, ರೈತರು ಮತ್ತು ಅಧಿಕಾರಿಗಳಿಂದ ಅಗತ್ಯ ಮಾಹಿತಿ ಪಡೆದುಕೊಂಡಿತು.

ಬರಪೀಡಿತ ಪ್ರದೇಶಗಳಿಗೆ ತೆರಳಿ ಪರಿಶೀಲನೆ ನಡೆಸಲು ಕೇಂದ್ರ ಬರ ಅಧ್ಯಯನ ತಂಡವು ಮೊದಲಿಗೆ ಜಗಳೂರು ತಾಲ್ಲೂಕಿನ ದೊಣ್ಣೆಹಳ್ಳಿ ಗ್ರಾಮದ ರೈತರಾದ ಜಯಮ್ಮ ಅವರ 4 ಎಕರೆ ರಾಗಿ, ಸೋಮಶೇಖರ್ ಅವರ 1.39 ಎಕರೆಯಲ್ಲಿ ಬೆಳೆದಿರುವ ರಾಗಿ, ತಿಪ್ಪೇರುದ್ರಪ್ಪ ಅವರ 3 ಎಕರೆ ಮೆಕ್ಕೆಜೋಳ ಬೆಳೆ ವೀಕ್ಷಣೆ ನಂತರ ಶಾಂತಮ್ಮ ನವರು ಬೆಳೆದ ನವಣೆ ವೀಕ್ಷಣೆ ಮಾಡಿತು. ರೈತರು ಹಾಗೂ ಅಧಿಕಾರಿಗಳು ಮಳೆಯ ಕೊರತೆಯಿಂದ ಬೆಳೆ ಹಾನಿಯಾದ ಬಗ್ಗೆ ಪೈರುಗಳನ್ನು ತೋರಿಸಿ, ಬರದ ತೀವ್ರತೆಯ ಬಗ್ಗೆ ಮನವರಿಕೆ ಮಾಡಿಕೊಟ್ಟರು. ರೈತರು ಮುಂಗಾರು ಮಳೆ ಇಲ್ಲದೆ ಬೆಳೆ ಹಾನಿಯಾದ ಬಗ್ಗೆ ಹಾಗೂ ಉಂಟಾದ ನಷ್ಟದ ಬಗ್ಗೆ ತಮ್ಮ ಅಳಲನ್ನು ತೋಡಿಕೊಂಡು, ಬೆಳೆ ನಷ್ಟ ಪರಿಹಾರಕ್ಕೆ ರೈತರು ಮನವಿ ಮಾಡಿದರು. ದಾವಣಗೆರೆ ಜಿಲ್ಲಾಧಿಕಾರಿ ಡಾ.ಎಂ.ವಿ.ವೆಂಕಟೇಶ್ ಮಾತನಾಡಿ, ಜಿಲ್ಲೆಯ ಬರಪರಿಸ್ಥಿತಿ ಅಧ್ಯಯನ ಮಾಡಲು ಹಾಗೂ ವಿಸ್ತೃತ ವರದಿ ನೀಡಲು ಜಿಲ್ಲೆಯ ಜಗಳೂರು ತಾಲ್ಲೂಕಿಗೆ ಕೇಂದ್ರ ಬರ ಅಧ್ಯಯನ ತಂಡ ಆಗಮಿಸಿದ್ದು, ಜಗಳೂರು ತಾಲ್ಲೂಕಿನ ವಿವಿಧೆಡೆ ರೈತರ ಜಮೀನುಗಳಿಗೆ ಭೇಟಿ ನೀಡಿ, ಬರಪರಿಶೀಲನೆ ನಡೆಸಲಾಗಿದೆ ಎಂದರು.

ದಾವಣಗೆರೆ ಜಿಲ್ಲೆಯಲ್ಲಿ ಶೇ.93ರಷ್ಟು ಬಿತ್ತನೆಯಾಗಿದ್ದು, ತೀವ್ರ ಬರಪರಿಸ್ಥಿತಿ ಕಾರಣದಿಂದಾಗಿ ಜಿಲ್ಲೆಯ ಎಲ್ಲಾ ಆರು ತಾಲ್ಲೂಕುಗಳನ್ನು ಬರ ಪೀಡಿತ ತಾಲ್ಲೂಕುಗಳು ಎಂದು ರಾಜ್ಯ ಸರ್ಕಾರ ಘೋಷಣೆ ಮಾಡಿದ್ದು, ಅದರಂತೆ ಜಂಟಿ ಸಮೀಕ್ಷೆ ಮಾಡಿ 1.57 ಲಕ್ಷ ಹೆಕ್ಟೇರ್ ಪ್ರದೇಶಕ್ಕೆ ಎನ್‌ಡಿಆರ್‌ಎಫ್ ಮಾರ್ಗಸೂಚಿಯಂತೆ ಇನ್‌ಪುಟ್ ಸಬ್ಸಿಡಿ ನೀಡುವಂತೆ ವರದಿ ಸಲ್ಲಿಸಿದ್ದು, ಆ ವರದಿಯಂತೆ ಬರಪರಿಸ್ಥಿತಿ ಪರಿಶೀಲಿಸಿ, ವಿಸ್ತೃತ ವರದಿ

ನೀಡಲು ಕೇಂದ್ರ ಬರ ಅಧ್ಯಯನ ಮೂರನೇ ತಂಡದ ನೇತೃತ್ವ ವಹಿಸಿರುವ ತಂಡ ಆಗಮಿಸಿದ್ದು, ಈ ತಂಡವು ರಾಗಿ ಮತ್ತು ಮೆಕ್ಕೆಜೋಳ ಬೆಳೆದ ರೈತರ ಜಮೀನುಗಳಿಗೆ ಭೇಟಿ ನೀಡಿ,

ಪರಿಶೀಲನೆ ನಡೆಸಿದೆ. ಇನ್ನೂ ಹಲವು ರೈತರ ಜಮೀನುಗಳಿಗೆ ಭೇಟಿ ನೀಡಿ ಬೆಳೆ ವೀಕ್ಷಣೆ ಮಾಡಲಿದೆ. ಒಟ್ಟಾರೆಯಾಗಿ ಜಿಲ್ಲೆಯ ಬರದ ಸ್ಥಿತಿಯ ಕುರಿತು ವಾಸ್ತವ ಸ್ಥಿತಿಯನ್ನು ಮನವರಿಕೆ ಮಾಡಿಕೊಡಲಾಗಿದೆ. ಕೇಂದ್ರ ಸರ್ಕಾರ ಪರಿಹಾರ ನೀಡಿದ ತಕ್ಷಣ ಎಲ್ಲ ರೈತರಿಗೆ ಪರಿಹಾರ ವಿತರಣೆಗೆ ಕ್ರಮಕೈಗೊಳ್ಳಲಾಗುವುದು ಎಂದರು.

ದಾವಣಗೆರೆ ಜಿಲ್ಲೆಯಲ್ಲಿ 2.27 ಲಕ್ಷ ಹೆಕ್ಟೇರ್ ಪೈಕಿ 1.57 ಲಕ್ಷ ಹೆಕ್ಟೇರ್ ಬೆಳೆ ಹಾನಿಯಾಗಿದೆ. ವಿಮೆ ಕಂಪನಿಗಳ ಪ್ರತಿನಿಧಿಗಳ ಜೊತೆ ಸಭೆ ನಡೆಸಿ ಕಟ್ಟುನಿಟ್ಟಿನ ಕ್ರಮಕೈಗೊಂಡು 47 ಸಾವಿರ ರೈತರಿಗೂ ಬೆಳೆ ವಿಮೆ ಪರಿಹಾರ ವಿತರಣೆಗೆ ಕ್ರಮವಹಿಸಲಾಗುವುದು ಎಂದು ಜಿಲ್ಲಾಧಿಕಾರಿ ಡಾ.ಎಂ.ವಿ.ವೆಂಕಟೇಶ್ ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ ಇಟ್ನಾಳ್, ಕೃಷಿ ಇಲಾಖೆ ಜಂಟಿ ಕೃಷಿ ನಿರ್ದೇಶಕ, ತೋಟಗಾರಿಕೆ ಇಲಾಖೆ, ಪಶುಪಾಲನಾ ಮತ್ತು ಪಶುವೈದ್ಯಕೀಯ ಇಲಾಖೆ ಅಧಿಕಾರಿಗಳು, ಕಂದಾಯ ಇಲಾಖೆ ಅಧಿಕಾರಿಗಳು ಇದ್ದರು.



### ಕೇಂದ್ರ ಬರ ಅಧ್ಯಯನ ಮೂರನೇ ತಂಡದ ನೇತೃತ್ವವಹಿಸಿರುವ ಕೇಂದ್ರ ಜಲಶಕ್ತಿ ಆಯೋಗದ ನಿರ್ದೇಶಕ ವಿ.ಅಶೋಕ್ ಕುಮಾರ್ ಹೇಳಿಕೆ

## ಬರ: ಸರ್ಕಾರಕ್ಕೆ ವಾಸ್ತವ ವರದಿ ಸಲ್ಲಿಕೆ

» ದಾವಣಗೆರೆ

ಸರ್ಕಾರದ ಮಾರ್ಗ ಸೂಚಿಯನ್ವಯ ಜಿಲ್ಲೆಯ ಬರಪರಿಸ್ಥಿತಿಯ ವಾಸ್ತವ ಸ್ಥಿತಿಯ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಲಾಗುವುದು ಎಂದು ಕೇಂದ್ರ ಬರ ಅಧ್ಯಯನ ಮೂರನೇ ತಂಡದ ನೇತೃತ್ವವಹಿಸಿರುವ ಕೇಂದ್ರ ಜಲಶಕ್ತಿ ಆಯೋಗದ ನಿರ್ದೇಶಕ ವಿ.ಅಶೋಕ್ ಕುಮಾರ್ ಹೇಳಿದರು.

ಜಿಲ್ಲೆಯ ಜಗಳೂರು ತಾಲ್ಲೂಕಿನ ವಿವಿಧೆಡೆ ರೈತರ ಜಮೀನುಗಳಿಗೆ ಭೇಟಿ ನೀಡಿ, ಮಳೆ ಕೊರತೆಯಿಂದ ಉಂಟಾದ ಬೆಳೆ ಹಾನಿ ವೀಕ್ಷಣೆ ಮಾಡಿ ನಂತರ ಮಾಧ್ಯಮದರೊಂದಿಗೆ ಮಾತನಾಡಿದರು. ಈಗಾಗಲೇ ಚಿಕ್ಕಬಳ್ಳಾಪುರ ಹಾಗೂ ತುಮಕೂರು ಜಿಲ್ಲೆಗಳ ಬರ ಅಧ್ಯಯನ ಕಾರ್ಯಕೈಗೊಂಡು, ಶನಿವಾರ ಚಿತ್ರದುರ್ಗ ಹಾಗೂ ದಾವಣಗೆರೆ ಜಿಲ್ಲೆಯ ವಿವಿಧೆಡೆ ರೈತರ ಜಮೀನುಗಳಿಗೆ ಭೇಟಿ ನೀಡಿ, ಬರ ಪರಿಸ್ಥಿತಿಯ ಅಧ್ಯಯನ ಮಾಡಲಾಗುತ್ತಿದೆ. ಜಿಲ್ಲೆಯ ಬರ ಪರಿಸ್ಥಿತಿಯ ಕುರಿತು ರೈತರೊಂದಿಗೆ ಸಂವಾದ ನಡೆಸಿ, ಮಾಹಿತಿ ಪಡೆಯಲಾಗುತ್ತಿದೆ. ಇದರ ಜೊತೆಗೆ ಜಿಲ್ಲಾಡಳಿತವು ಸಹ ಬರದ ವಾಸ್ತವ ಸ್ಥಿತಿಯನ್ನು ಮನವರಿಕೆ ಮಾಡಿಕೊಟ್ಟಿದೆ ಎಂದು ತಿಳಿಸಿದ ಅವರು, ಜಿಲ್ಲೆಯ ವಾಸ್ತವ ಸ್ಥಿತಿಯ ವರದಿಯನ್ನು ರಾಜ್ಯದ ಬರ ಅಧ್ಯಯನ ತಂಡದ ನೇತೃತ್ವ ವಹಿಸಿರುವ ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವಾಲಯದ ಜಂಟಿಕಾರ್ಯದರ್ಶಿ ಅಜಿತ್ ಕುಮಾರ್ ಸಾಹು ಅವರಿಗೆ ಸಲ್ಲಿಸಲಾಗುವುದು, ಬಳಿಕ ರಾಜ್ಯದ ಸಂಗ್ರಹಿತ ಕ್ರೋಢೀಕೃತ ವರದಿಯನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗುವುದು ಎಂದರು.

---

## ಪ.ಜಾತಿ, ಪ.ವರ್ಗಗಳ ಏಳಿಗೆಗೆ ಶ್ರಮಿಸಿ: ಡಿಸಿ

» ದಾವಣಗೆರೆ

ಜಿಲ್ಲೆಯಲ್ಲಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದವರ ಸರ್ವತೋಮುಖ ಏಳಿಗೆಗೆ ಶ್ರಮಿಸಿ ಎಂದು ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಎಂ.ವಿ ಅಧಿಕಾರಿಗಳಿಗೆ ಸೂಚಿಸಿದರು.

ಶುಕ್ರವಾರ ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಪ್ರಸಕ್ತ ಸಾಲಿನ ಮೂರನೇ ತ್ರೈಮಾಸಿಕ ಜಿಲ್ಲಾ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದವರ ಮೇಲಾಗುತ್ತಿರುವಂತಹ ದೌರ್ಜನ್ಯಗಳನ್ನು ಸಂಬಂಧಿಸಿದ ಇಲಾಖೆ ಅಧಿಕಾರಿಗಳು ಗಂಭೀರವಾಗಿ ಪರಿಗಣಿಸಿ ಅಂತವರಿಗೆ ನ್ಯಾಯಯುತವಾದ ಪರಿಹಾರ ಒದಗಿಸಬೇಕು. ದೌರ್ಜನ್ಯಕ್ಕೆ ಒಳಗಾಗಿ ಪ್ರಾಣ ಕಳೆದುಕೊಂಡ 7 ಪ್ರಕರಣಗಳಲ್ಲಿ, 5 ಪ್ರಕರಣಗಳಲ್ಲಿ ಕುಟುಂಬದ ಒಬ್ಬ ಸದಸ್ಯರಿಗೆ ಸರ್ಕಾರಿ ಕೆಲಸ ಹಾಗೂ ಪಿಂಚಣಿ ಸೌಲಭ್ಯ ಕಲ್ಪಿಸಲಾಗಿದೆ

ಹಳ್ಳಿಗಳಲ್ಲಿ ಕಾನೂನು ಬಾಹೀರವಾಗಿ ಮದ್ಯ ಮಾರಾಟ ಮಾಡುತ್ತಿದ್ದು, ಅಂತಹವರಿಗೆ ದಂಡ ವಿಧಿಸುವ ಮೂಲಕ ಕಾನೂನು ಕ್ರಮ ಕೈಗೊಳ್ಳಬೇಕು ಹಾಗೂ ಜನರಿಗೆ ಮದ್ಯಪಾನದ ದುಷ್ಪರಿಣಾಮದ ಕುರಿತು ಜಾಗೃತಿ ಮೂಡಿಸಬೇಕು ಎಂದರು.

ಜಿಲ್ಲೆಯಲ್ಲಿ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿ ಪ್ರವೇಶ ಪಡೆಯಲು ಹೆಚ್ಚು ಬೇಡಿಕೆಯಿದ್ದು, ವಸತಿಯುತ ಶಾಲೆಗಳ ಸ್ಥಾಪನೆಗೆ ಸರ್ಕಾರಕ್ಕೆ ಮನವಿ ಸಲ್ಲಿಸಲಾಗುವುದು. ಮಹಾನಗರ ಪಾಲಿಕೆಯಿಂದ ನೀಡಲಾಗುವ ವಿದ್ಯಾರ್ಥಿ ವೇತನದಲ್ಲಿ ಸರ್ಕಾರಿ ಶಾಲಾ, ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಮಕ್ಕಳಿಗೆ ಮೊದಲ ಆದ್ಯತೆ ನೀಡಬೇಕು.

ಅಲ್ಲದೆ ಸರ್ಕಾರಿ ಶಾಲೆ ಹಾಗೂ ಕಾಲೇಜುಗಳ ಆವರಣದಲ್ಲಿ ಮದ್ಯಪಾನ, ಧೂಮಪಾನ ಹಾಗೂ ಯಾವುದೇ ಕಾನೂನು ಬಾಹಿರ ಚಟುವಟಿಕೆಗಳನ್ನು ನಡೆಸುತಿದ್ದರೆ, ಅಂತವರ ವಿರುದ್ಧ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು. ನಗರದ ಹೊರವಲಯದಲ್ಲಿರುವ ಜೆ.ಹೆಚ್.ಪಟೇಲ್ ಬಡಾವಣೆಯಲ್ಲಿ ಸರ್ಕಾರಿ ಬಾಲಕಿಯರ ಹಾಸ್ಟೆಲ್‌ಗಳಿರುವುದರಿಂದ ವಿದ್ಯಾರ್ಥಿಗಳ ಭದ್ರತೆಗಾಗಿ ಪೊಲೀಸ್ ಬೀಟ್, ಸಿ.ಸಿ. ಕ್ಯಾಮೆರಾ ಹಾಗೂ ವಿದ್ಯಾರ್ಥಿಗಳ ಕಾಲೇಜು ಸಮಯಕ್ಕೆ ಸರಿಯಾಗಿ ಬಸ್ ವ್ಯವಸ್ಥೆ ಕಲ್ಪಿಸಲು ತಿಳಿಸಿದರು.

ಅಂಗನವಾಡಿ ಕೇಂದ್ರಗಳಲ್ಲಿ ಮಕ್ಕಳು, ಗರ್ಭಿಣಿಯರು ಹಾಗೂ ತಾಯಂದಿರಿಗೆ ಯಾವುದೇ ಕಾರಣಕ್ಕೂ ಕಳಪೆ ಆಹಾರವನ್ನು ನೀಡದೇ ಉತ್ತಮ ಗುಣಮಟ್ಟದ ಆಹಾರ ಪದಾರ್ಥಗಳನ್ನು ವಿತರಿಸಬೇಕು ಹಾಗೂ ಪೌಷ್ಠಿಕತೆ ಹೆಚ್ಚಿಸುವ ನಿಟ್ಟಿನಲ್ಲಿ ಸಕ್ಕರೆ ಬದಲಾಗಿ ಬೆಲ್ಲವನ್ನು ನೀಡಬೇಕು ಎಂದರು.

ನಗರದಲ್ಲಿ ಜಿಲ್ಲಾ ಮಟ್ಟದ ಡಾ.ಬಿ.ಆರ್ ಅಂಬೇಡ್ಕರ್ ಭವನ ನಿರ್ಮಾಣ ಮಾಡಲು ಅನುದಾನವಿದ್ದು, ಸೂಕ್ತ ಜಾಗವನ್ನು ಗುರುತಿಸಿ, ಭವನ ನಿರ್ಮಾಣಕ್ಕೆ ಶೀಘ್ರವಾಗಿ ಕ್ರಮ ಕೈಗೊಳ್ಳಲಾಗುವುದು ಎಂದರು

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸುರೇಶ್ ಬಿ ಇಟ್ನಾಳ್, ಅಪರ ಜಿಲ್ಲಾಧಿಕಾರಿ ಪಿ.ಎನ್ ಲೋಕೇಶ್, ಮಹಾನಗರ ಪಾಲಿಕೆ ಆಯುಕ್ತೆ ರೇಣುಕಾ, ಜಿಲ್ಲಾ ಪಂಚಾಯತ್ ಯೋಜನಾಧಿಕಾರಿ ಮಲ್ಲನಾಯ್ಕ್, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಲ್.ಹೆಚ್ ಅರುಣ್‌ಕುಮಾರ್, ಉಪವಿಭಾಗಾಧಿಕಾರಿ ದುರ್ಗಾಶ್ರೀ, ಹೊನ್ನಾಳಿ ಉಪವಿಭಾಗಾಧಿಕಾರಿ ಹುಲ್ಮನಿ ತಿಮ್ಮಣ್ಣ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಕೆ. ನಾಗರಾಜ್ ಉಪಸ್ಥಿತರಿದ್ದರು.



---

## ರಾಹುಲ್ ಗಾಂಧಿಯನ್ನು ರಾವಣಗೆ ಹೋಲಿಸಿ ಬಿಜೆಪಿ ಪೋಸ್ಟರ್ ಬಿಡುಗಡೆ: ಕಾಂಗ್ರೆಸ್ ಪ್ರತಿಭಟನೆ




» ಚಿತ್ರದುರ್ಗ

ಬಿಜೆಪಿ.ಯವರು ಸಾಮಾಜಿಕ ಜಾಲತಾಣದಲ್ಲಿ ರಾಹುಲ್‌ಗಾಂಧಿಯನ್ನು ರಾವಣನಿಗೆ ಹೋಲಿಸಿರುವುದನ್ನು ವಿರೋಧಿಸಿ ಜಿಲ್ಲಾ ಕಾಂಗ್ರೆಸ್ ಸಮಿತಿಯಿಂದ ಒನಕೆ ಓಬವ್ವ ವೃತ್ತದಲ್ಲಿ ಶನಿವಾರ ಪ್ರತಿಭಟನೆ ನಡೆಸಲಾಯಿತು.

ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂ.ಕೆ.ತಾಜ್‌ಪೀರ್ ಪ್ರತಿಭಟನೆಯನ್ನುದ್ದೇಶಿಸಿ ಮಾತನಾಡುತ್ತ ಎ.ಐ.ಸಿ.ಸಿ. ಅಧ್ಯಕ್ಷರಾಗಿದ್ದ ರಾಹುಲ್‌ಗಾಂಧಿ ಭಾರತ್ ಜೋಡೊ ಯಾತ್ರೆಯನ್ನು ಯಶಸ್ವಿಯಾಗಿ ಪೂರೈಸಿರುವುದನ್ನು ಸಹಿಸಿಕೊಳ್ಳಲು ಆಗದ ಕೋಮುವಾದಿ ಬಿಜೆಪಿ.ಯವರು ಸಾಮಾಜಿಕ ಜಾಲತಾಣದಲ್ಲಿ ರಾಹುಲ್‌ಗಾಂಧಿಯನ್ನು ರಾವಣನಿಗೆ ಹೋಲಿಕೆ ಮಾಡಿ ಅವಮಾನಿಸಿರುವುದನ್ನು ಸಹಿಸುವುದಿಲ್ಲ. ಕಾರ್ಮಿಕರು, ರೈತರು, ಮಹಿಳೆಯರು, ವಿದ್ಯಾರ್ಥಿಗಳ ಜೊತೆ ಸಾಮಾನ್ಯರಲ್ಲಿ ಅತಿ ಸಾಮಾನ್ಯರಂತೆ ಬೆರೆತು ಭಾರತ್ ಜೋಡೋ ಯಾತ್ರೆಯಲ್ಲಿ ರಾಹುಲ್‌ಗಾಂಧಿ ಸಮಸ್ಯೆಗಳನ್ನು ಆಲಿಸಿದ್ದು, ಬಿಜೆಪಿ.ಯವರಿಗೆ ಭಯ ಹುಟ್ಟಿರುವುದರಿಂದ ಇಲ್ಲಸಲ್ಲದ ಅಪಪ್ರಚಾರದಲ್ಲಿ ತೊಡಗಿದ್ದಾರೆ. ರಾಹುಲ್‌ಗಾಂಧಿ ಒಬ್ಬ ವ್ಯಕ್ತಿಯಲ್ಲ. ಅವರೊಬ್ಬ ಶಕ್ತಿಯಿದ್ದಂತೆ ಯಾವಾಗಲು ಕಾರ್ಯಕರ್ತರು ಅವರ ಜೊತೆಯಿದ್ದು, ಆತ್ಮಸ್ಥೈರ್ಯ ತುಂಬುವ ಕೆಲಸ ಮಾಡುತ್ತಿದ್ದಾರೆಂದು ಹೇಳಿದರು.

---

**ಪ್ರಮುಖ ಸುದ್ದಿ**

# ವಿವಿಧ ಬೇಡಿಕೆ ಈಡೇರಿಸುವಂತೆ ಸಿಪಿಐ ಪ್ರತಿಭಟನೆ

» ಚಿತ್ರದುರ್ಗ

ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕಿಯರು, ಆಶಾ ಕಾರ್ಯಕರ್ತೆಯರು ಹಾಗೂ ಬಿಸಿಯೂಟ ಕಾರ್ಯಕರ್ತೆಯರಿಗೆ ಗೌರವ ಧನ ಹೆಚ್ಚಳ ಸೇರಿದಂತೆ ಅನೇಕ ಬೇಡಿಕೆಗಳನ್ನು ಈಡೇರಿಸುವಂತೆ ಭಾರತ ಕಮ್ಯುನಿಸ್ಟ್ ಪಕ್ಷ ಜಿಲ್ಲಾ ಮಂಡಳಿಯಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಶನಿವಾರ ಪ್ರತಿಭಟನೆ ನಡೆಸಿ ತಹಶೀಲ್ದಾರ್‌ಗೆ ಮನವಿ ಸಲ್ಲಿಸಲಾಯಿತು.

ದಾವಣಗೆರೆ ರಸ್ತೆಯಲ್ಲಿರುವ ಸಿ.ಪಿ.ಐ. ಕಚೇರಿಯಿಂದ ಮೆರವಣಿಗೆ ಮೂಲಕ ಜಿಲ್ಲಾಧಿಕಾರಿ ಕಚೇರಿಗೆ ಆಗಮಿಸಿದ ಪ್ರತಿಭಟನಾಕಾರರು ವಿಧಾನಸಭೆ ಚುನಾವಣೆ ಪೂರ್ವದಲ್ಲಿ ಕಾಂಗ್ರೆಸ್‌ನ ಸಿದ್ದರಾಮಯ್ಯ ಹಾಗೂ ಡಿ.ಕೆ.ಶಿವಕುಮಾರ್ ಇವರುಗಳು ಘೋಷಿಸಿದ ಐದು ಉಚಿತ ಗ್ಯಾರೆಂಟಿಗಳಂತೆ ಅಸಂಘಟಿತ ಕಾರ್ಮಿಕರಿಗೆ ಆರನೆ ಗ್ಯಾರೆಂಟಿಯನ್ನು ಘೋಷಿಸುವಂತೆ ರಾಜ್ಯ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿದರು. ಅಂಗನವಾಡಿ ಕಾರ್ಯಕರ್ತೆಯರಿಗೆ ಮಾಸಿಕ ಹದಿನೈದು ಸಾವಿರ, ಸಹಾಯಕಿಯರಿಗೆ ಹತ್ತು ಸಾವಿರ ರೂ. ಆಶಾ ಕಾರ್ಯಕರ್ತೆಯರಿಗೆ ಎಂಟು ಸಾವಿರ ರೂ. ಬಿಸಿಯೂಟ ಕಾರ್ಯಕರ್ತೆಯರಿಗೆ ಆರು ಸಾವಿರ ರೂ.ಗಳ ಗೌರವ ಧನ ಹೆಚ್ಚಳ ಮಾಡುವುದಾಗಿ ನೀಡಲಾಗಿದ್ದ ಭರವಸೆಯನ್ನು ರಾಜ್ಯ ಸರ್ಕಾರ ಈಡೇರಿಸುವಂತೆ ಪ್ರತಿಭಟನಾಕಾರರು ಒತ್ತಾಯಿಸಿದರು.

ಬಿಜೆಪಿ. ಸರ್ಕಾರ ಜಾರಿಗೆ ತಂದಿದ್ದ ಕೃಷಿ ಕಾಯಿದೆ, ಎ.ಪಿ.ಎಂ.ಸಿ.ಕಾಯಿದೆ ರದ್ದುಗೊಳಿಸಿ ರೈತರ ಮೇಲೆ ದಾಖಲಾಗಿರುವ ಎಲ್ಲಾ ಮೊಕದ್ದಮೆಗಳನ್ನು ಹಿಂದಕ್ಕೆ ಪಡೆಯಬೇಕು.

ಕಾರ್ಮಿಕರ ದೈನಂದಿನ ಕೆಲಸದ ಅವಧಿಯನ್ನು ಎಂಟು ಗಂಟೆಯಿಂದ ಹನ್ನೆರಡು ಗಂಟೆಗೆ ವಿಸ್ತರಿಸಿ ಬಿಜೆಪಿ. ಸರ್ಕಾರ ಫ್ಯಾಕ್ಟರಿ ಕಾಯಿದೆಗೆ ತಂದಿದ್ದ ತಿದ್ದುಪಡಿಗಳನ್ನು ರದ್ದುಗೊಳಿಸಿ ಹಿಂದಿನಂತೆ ಕೆಲಸದ ಅವಧಿಯನ್ನು ಎಂಟು ಗಂಟೆಗೆ ಮಿತಿಗೊಳಿಸಿ ಮಹಿಳೆಯರು ರಾತ್ರಿ ಪಾಳೆಯದಲ್ಲಿ ಕೆಲಸ ಮಾಡುವ ಕಾನೂನು ಹಿಂದಕ್ಕೆ ಪಡೆಯಬೇಕು.

ಅತಿಥಿ ಶಿಕ್ಷಕರು ಮತ್ತು ಉಪನ್ಯಾಸಕರನ್ನು ಖಾಯಂಗೊಳಿಸುವುದಕ್ಕೆ ಸೂಕ್ತ ಯೋಜನೆಯನ್ನು ರೂಪಿಸಬೇಕು. ವರ್ಷಕ್ಕೆ 2500 ಸರ್ಕಾರಿ ಶಾಲೆಗಳನ್ನು ಸ್ಮಾರ್ಟ್ ಶಾಲೆಗಳನ್ನಾಗಿ ಉನ್ನತೀಕರಿಸಿ ಸರ್ಕಾರಿ ಮತ್ತು ಅನುದಾನಿತ ಶಾಲೆ-ಕಾಲೇಜುಗಳಲ್ಲಿ ಖಾಲಿಯಿರುವ ಶಿಕ್ಷಕರ ಮತ್ತು ಬೋಧಕರು ರಾಜ್ಯದ ವಿವಿಧ ಇಲಾಖೆಗಳಲ್ಲಿ ಖಾಲಿಯಿರುವ ಎರಡು ಲಕ್ಷಕ್ಕೂ ಹೆಚ್ಚಿನ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮಕೈಗೊಳ್ಳಬೇಕು ಎಂದು ಒತ್ತಾಯಿಸಿದ ಪ್ರತಿಭಟನಾಕಾರರು ಒಟ್ಟು ಹದಿನಾರು ಬೇಡಿಕೆಗಳನ್ನು ಈಡೇರಿಸುವಂತೆ ರಾಜ್ಯ ಸರ್ಕಾರವನ್ನು ಕೋರಿದರು.



## ಫಾಸ್ಟ್ ನ್ಯೂಸ್

### ಉಪ್ಪಾರ ನಿಗಮ: ಸಾಲ ಸೌಲಭ್ಯಕ್ಕಾಗಿ ಅರ್ಜಿ

» ಚಿತ್ರದುರ್ಗ

ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮದಿಂದ ಜಿಲ್ಲೆಯ ಹಿಂದುಳಿದ ವರ್ಗಗಳಿಗೆ ಸೇರಿದ ಪ್ರವರ್ಗ–1ರಲ್ಲಿ ಬರುವ ಉಪ್ಪಾರ ಮತ್ತು ಅದರ ಉಪಜಾತಿಗೆ ಸೇರಿದ ಜನರ ಆರ್ಥಿಕ ಅಭಿವೃದ್ಧಿಗಾಗಿ ವಿವಿಧ ಯೋಜನೆಗಳಡಿ 2023–24ನೇ ಸಾಲಿಗೆ ಸಾಲ ಸಾಲಭ್ಯಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ. ಸ್ವಯಂ ಉದ್ಯೋಗ ನೇರ ಸಾಲ, ಅರಿವು–ಶೈಕ್ಷಣಿಕ ಸಾಲ ಗಂಗಾ ಕಲ್ಯಾಣ, ಸ್ವಾವಲಂಬಿ ಸಾರಥಿ, ಯೋಜನೆಯಡಿ ಆಸಕ್ತರು ಸಾಲ ಸೌಲಭ್ಯ ಪಡೆಯಬಹುದು. ಆನ್‌ಲೈನ್ ಮೂಲಕ ಸೇವಾ ಸಿಂಧು ಪೋರ್ಟಲ್‌ನಲ್ಲಿ ಅರ್ಜಿ ಸಲ್ಲಿಸಬಹುದಾಗಿದ್ದು, ನವೆಂಬರ್ 3 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಅರಿವು ಶೈಕ್ಷಣಿಕ ಸಾಲ ಯೋಜನೆಗಳಿಗೆ ಕೊನೆಯ ದಿನಾಂಕ ಇರುವುದಿಲ್ಲ. ರಾಜ್ಯದ ಖಾಯಂ ನಿವಾಸಿಗಳಾದ, ಉಪ್ಪಾರ ಹಾಗೂ ಅದರ ಉಪ ಸಮುದಾಯಗಳಿಗೆ ಸೇರಿದ ಜಾತಿ ಆದಾಯ ಪ್ರಮಾಣ ಪತ್ರ ಹೊಂದಿದ, 18 ರಿಂದ 55 ವರ್ಷಗಳ ಮಿತಿಯಲ್ಲಿರುವ, ಈ ಹಿಂದೆ ನಿಗಮ ಹಾಗೂ ಸರ್ಕಾರಿದಿಂದ ಸೌಲಭ್ಯ ಪಡೆದಿರುವವರು ಅರ್ಜಿ ಸಲ್ಲಿಸಬಹುದು. ಕುಟುಂಬದ ಒಬ್ಬರಿಗೆ ಮಾತ್ರ ಸಾಲ ಸೌಲಭ್ಯ ಒದಗಿಸಲಾಗುವುದು, ಶೈಕ್ಷಣಿಕ ಹಾಗೂ ಸ್ವಾವಲಂಬಿ ಸಾರಥಿ ಯೋಜನೆಯಡಿ ಸಾಲ ಪಡೆಯುವ ಅಭ್ಯರ್ಥಿಗಳ ವಯೋಮಿತಿ 18 ರಿಂದ 30 ವರ್ಷಗಳು ಇರಬೇಕು. ಶೈಕ್ಷಣಿಕ ಸಾಲ ಮಂಜೂರಾತಿ ವಾರ್ಷಿಕ ರೂ.3.5 ಲಕ್ಷ, ಇತರೆ ಯೋಜನೆಗಳಿಗೆ ಗ್ರಾಮಾಂತರ ಪ್ರದೇಶದಲ್ಲಿ ವಾರ್ಷಿಕ ರೂ.98 ಸಾವಿರ ಹಾಗೂ ನಗರ ಪ್ರದೇಶದಲ್ಲಿ ವಾರ್ಷಿಕ ರೂ.1.20 ಲಕ್ಷ ಆದಾಯ ಮಿತಿ ನಿಗದಿಪಡಿಸಲಾಗಿದೆ. ಯೋಜನೆಗಳ ಫಲಾನುಭವಿಗಳ ಆಯ್ಕೆಯಲ್ಲಿ ನಿಯಮಾನುಸಾರ ಮಹಿಳೆಯರಿಗೆ ಶೇ.33 ವಿಕಲಚೇತನರಿಗೆ ಶೇ.5 ಹಾಗೂ ತೃತೀಯ ಲಿಂಗಿಗಳಿಗೆ ಶೇ.1% ರಷ್ಟು ಮೀಸಲಾತಿಯನ್ನು ನೀಡಲಾಗುವುದು.ಅರ್ಜಿದಾರರು ಮೊಬೈಲ್ ಸಂಖ್ಯೆಯನ್ನು ಆಧಾರ್ ಹಾಗೂ ಬ್ಯಾಂಕ್ ಖಾತೆ ಜೊಡಣೆ ಮಾಡಿರಬೇಕು. ಕಡ್ಡಾಯವಾಗಿ ಆಧಾರ್ ಕಾರ್ಡ್‌ನಲ್ಲಿರುವಂತೆ ಅರ್ಜಿದಾರರ ಹೆಸರು, ವಿಳಾಸ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಮತ್ತು ಬ್ಯಾಂಕ್ ಪಾಸ್ ಪುಸ್ತಕಗಳಲ್ಲಿ ಹೊಂದಾಣಿಕೆಯಾಗಬೇಕು.ಬೆಂಗಳೂರು ಒನ್, ಕರ್ನಾಟಕ–ಒನ್, ಅಟಲ್–ಜಿ ಜನಸ್ನೇಹಿ ಕೇಂದ್ರ ಮತ್ತು ನಾಗರಿಕ ಸೇವಾ ಕೇಂದ್ರ್ರಗಳಲ್ಲಿ ಆನ್‌ಲೈನ್ ಮೂಲಕ ಸೇವಾಸಿಂಧು ಪೋರ್ಟಲ್‌ನಡಿ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್ http://upparadevelopment.karnataka.gov.in ಅಥವಾ ಕಚೇರಿ ದೂರವಾಣಿ ಸಂಖ್ಯೆ 080–22252555 ಗೆ ಸಂಪರ್ಕಿಸಬಹುದು. ಅರ್ಜಿ ಸಲ್ಲಿಸಲು ನವೆಂಬರ್ 3 ಕೊನೆಯ ದಿನವಾಗಿದೆ ಎಂದು ನಿಗಮದ ಜಿಲ್ಲಾ ವ್ಯವಸ್ಥಾಪಕ ಇ. ಸಂಪತ್‌ಕುಮಾರ್ ತಿಳಿಸಿದ್ದಾರೆ.

### ವಿಕಲಚೇತನ ವಿದ್ಯಾರ್ಥಿವೇತನ: ಅರ್ಜಿ

» ಚಿತ್ರದುರ್ಗ

2023–24ನೇ ಸಾಲಿನ ರಾಜ್ಯ ವಿದ್ಯಾರ್ಥಿ ವೇತನ ತಂತ್ರಾಂಶದಲ್ಲಿ (ಎಸ್‌ಎಸ್‌ಪಿ ಪೋರ್ಟಲ್) ಮೆಟ್ರಿಕ್ ನಂತರ ವಿದ್ಯಾರ್ಥಿವೇತನಕ್ಕೆ ಅರ್ಜಿ ಆಹ್ವಾನಿಸಲಾಗಿದೆ.ಜಿಲ್ಲೆಯ ವ್ಯಾಪ್ತಿಯಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಅರ್ಹ ವಿಕಲಚೇತನ ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿರುವ ಕಾಲೇಜು, ಶಿಕ್ಷಣ ಸಂಸ್ಥೆಗಳ ಮುಖಾಂತರ ಆನ್‌ಲೈನ್ ಮೂಲಕ ವೆಬ್‌ಸೈಟ್ https://ssp.postmatric.karnata.gov.in ನಲ್ಲಿ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಿದ ಒಂದು ಪ್ರತಿಯನ್ನು ಆಯಾ ತಾಲ್ಲೂಕು ಪಂಚಾಯಿತಿ ಕಾರ್ಯ ನಿರ್ವಹಿಸುತ್ತಿರುವ ವಿವಿದೊದ್ದೇಶ ಪುನರ್ವಸತಿ ಕಾರ್ಯಕರ್ತರು ಅಥವಾ ಗ್ರಾಮ ಪಂಚಾಯತಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರಿಗೆ ಸಲ್ಲಿಸಬೇಕು.ಹೆಚ್ಚಿನ ಮಾಹಿತಿಗಾಗಿ, ತಾಲ್ಲೂಕು ಪಂಚಾಯಿತಿ ಕಚೇರಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿದೊದ್ದೇಶ ಪುನರ್ವಸತಿ ಕಾರ್ಯಕರ್ತರ ದೂರವಾಣಿ ಸಂಖ್ಯೆ ಚಿತ್ರದುರ್ಗ–9880821934, ಚಳ್ಳಕೆರೆ–9611266930, ಹಿರಿಯೂರು–9902888901, 9902898901, ಹೊಳಲ್ಕೆರೆ–9740030227, ಹೊಸದುರ್ಗ–9741829990, ಮೊಳಕಾಲ್ಮೂರು–9742725576, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಚೇರಿಯ ದೂರವಾಣಿ ಸಂಖ್ಯೆ 08194–235284 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಜೆ.ವೈಶಾಲಿ ತಿಳಿಸಿದ್ದಾರೆ.

### ರಾಣಿ ಚೆನ್ನಮ್ಮ ಜಯಂತಿ ಪೂರ್ವಭಾವಿ ಸಭೆ

» ಚಿತ್ರದುರ್ಗ

ಇದೇ ಅಕ್ಟೋಬರ್ 23ರಂದು ಕಿತ್ತೂರು ರಾಣಿ ಚೆನ್ನಮ್ಮ ಜಯಂತಿ ಆಚರಿಸುವ ಸಂಬಂಧ ಅಗತ್ಯ ಪೂರ್ವ ಸಿದ್ಧತೆ ಕೈಗೊಳ್ಳುವ ಬಗ್ಗೆ ಚರ್ಚಿಸಲು ಅಕ್ಟೋಬರ್ 10ರಂದು ಬೆಳಿಗ್ಗೆ 11ಕ್ಕೆ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಕರೆಯಲಾಗಿದೆ. ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಸಭೆಯ ಅಧ್ಯಕ್ಷತೆ ವಹಿಸುವರು. ಎಲ್ಲ ಸಮಾಜದವರು ಸಭೆಗೆ ಹಾಜರಾಗಿ ಸಲಹೆ ನೀಡಬೇಕು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ ತಿಳಿಸಿದ್ದಾರೆ.

---

### ಕೇಂದ್ರ ತಂಡಕ್ಕೆ ಭೀಕರ ಬರ ಪರಿಸ್ಥಿತಿ ಮನವರಿಕೆ ಮಾಡಿಕೊಟ್ಟ ಚಿತ್ರದುರ್ಗ ಜಿಲ್ಲಾಡಳಿತ

# ಮಳೆ ಕೊರತೆ; ಜಿಲ್ಲೆಯಲ್ಲಿ 2.4 ಲಕ್ಷ ಹೆ.ಬೆಳೆ ಹಾನಿ

» ಚಿತ್ರದುರ್ಗ

ಜಿಲ್ಲೆಯಲ್ಲಿ ಈ ವರ್ಷ ಸಕಾಲದಲ್ಲಿ ಉತ್ತಮ ಮಳೆ ಬಾರದೆ ಮುಂಗಾರು ಮಳೆ ಕೈಕೊಟ್ಟಿದ್ದರಿಂದ ಹಸಿರು ಬರ ಪರಿಸ್ಥಿತಿ ನಿರ್ಮಾಣವಾಗಿದ್ದು, ಇದರಿಂದಾಗಿ ಜಿಲ್ಲೆಯಲ್ಲಿ ಕೃಷಿ ಮತ್ತು ತೋಟಗಾರಿಕೆ ಸೇರಿದಂತೆ ಒಟ್ಟು 2.4 ಲಕ್ಷ ಹೆ. ಬೆಳೆ ಹಾನಿಗೀಡಾಗಿದೆ, ಎನ್‌ಡಿಆರ್‌ಎಫ್ ಮಾರ್ಗಸೂಚಿಯನ್ವಯ ಒಟ್ಟು 189.63 ಕೋಟಿ ರೂ. ಪರಿಹಾರ ಮೊತ್ತ ಬಿಡುಗಡೆಗೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂಬುದಾಗಿ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ. ಅವರು ಕೇಂದ್ರ ಬರ ಅಧ್ಯಯನ ತಂಡಕ್ಕೆ ಜಿಲ್ಲೆಯ ಭೀಕರ ಬರ ಪರಿಸ್ಥಿತಿಯ ಬಗ್ಗೆ ಅಂಕಿ–ಅಂಶ ಸಹಿತ ಮನವರಿಕೆ ಮಾಡಿಕೊಟ್ಟರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶನಿವಾರದಂದು, ಜಿಲ್ಲೆಯ ವಿವಿಧ ಗ್ರಾಮಗಳ ಜಮೀನುಗಳಿಗೆ ಬರ ಪರಿಸ್ಥಿತಿಯ ವೀಕ್ಷಣೆಗಾಗಿ ಕೇಂದ್ರ ಬರ ಅಧ್ಯಯನಕ್ಕಾಗಿ ಆಗಮಿಸಿರುವ ತಂಡವು ತೆರಳುವ ಮುನ್ನ, ಜಿಲ್ಲೆಯ ಬರದ ಸ್ಥಿತಿಗತಿಗಳ ಕುರಿತು ತಂಡದ ಸದಸ್ಯರುಗಳಿಗೆ ಮಾಹಿತಿ ನೀಡುವ ಸಲುವಾಗಿ ಏರ್ಪಡಿಸಿದ ಸಭೆಯಲ್ಲಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಈ ಬಾರಿ ಮುಂಗಾರು ಮಳೆ ತಡವಾಗಿ ಆಗಮಿಸಿತು, ಜೂನ್ ಹಾಗೂ ಜುಲೈ ತಿಂಗಳಿನಲ್ಲಿ ಬಂದ ಮಳೆಯಿಂದಾಗಿ ರೈತರು ಬೆಳೆ ಬಿತ್ತನೆ ಮಾಡಿದರು, ಜಿಲ್ಲೆಯಲ್ಲಿ ಒಟ್ಟಾರೆ ಶೇ. 94 ರಷ್ಟು ಬಿತ್ತನೆಯಾಗಿದೆ. ಆದರೆ ಆಗಸ್ಟ್ ತಿಂಗಳಿನಲ್ಲಿ ಮಳೆ ಸಂಪೂರ್ಣ ಕೈಕೊಟ್ಟು, ತೇವಾಂಶದ ಕೊರತೆ ಜಿಲ್ಲೆಯಾದ್ಯಂತ ಕಾಡಿತು.



ಜೂನ್ ನಿಂದ ಆಗಸ್ಟ್ ವರೆಗೆ 174 ಮಿ.ಮೀ. ಬದಲಿಗೆ ಕೇವಲ 135 ಮಿ.ಮೀ. ಮಳೆ ಆಗಿದೆ, ಅದೂ ಕೂಡ ಪೈರಿಗೆ ಬೇಕಾದ ಸಮಯಕ್ಕೆ ಬರಲಿಲ್ಲ. ಹೀಗಾಗಿ ಜಿಲ್ಲೆಯ ಹೊಲಗಳಲ್ಲಿ ಬೆಳೆ ಮೇಲ್ನೋಟಕ್ಕೆ ಹಸಿರಾಗಿ ಕಾಣುತ್ತಿದ್ದರೂ, ಅವುಗಳಲ್ಲಿ ಯಾವುದೇ ಇಳುವರಿ ಬಂದಿಲ್ಲ, ಈರುಳ್ಳಿ ಬೆಳೆಯಲ್ಲಿ ಈರುಳ್ಳಿ ಗಡ್ಡೆಯೇ ರೂಪುಗೊಂಡದ ಸ್ಥಿತಿಯಲ್ಲಿ ಬೆಳೆ ಇದೆ. ಇದರಿಂದಾಗಿ ರೈತರು ಬೆಳೆ ನಷ್ಟ ಅನುಭವಿಸುತ್ತಿದ್ದಾರೆ. ಜಿಲ್ಲೆಯಲ್ಲಿ 2,35,507 ಹೆ. ನಷ್ಟ ಕೃಷಿ ಬೆಳೆ ಹಾನಿಯಾಗಿದ್ದು, ಎನ್‌ಡಿಆರ್‌ಎಫ್ ಮಾರ್ಗಸೂಚಿಯನ್ವಯ 185.56 ಕೋಟಿ ರೂ. ಹಾಗೂ 4790 ಹೆ. ತೊಟಗಾರಿಕೆ ಬೆಳೆ ಹಾನಿಯಾಗಿದ್ದು, ಮಾರ್ಗಸೂಚಿಯನ್ವಯ 4.08 ಕೋಟಿ ರೂ. ಸೇರಿದಂತೆ, ಒಟ್ಟಾರೆ ಕೃಷಿ ಮತ್ತು ತೋಟಗಾರಿಕೆ ಸೇರಿದಂತೆ 2,40,296 ಹೆ. ಬೆಳೆ ನಷ್ಟಕ್ಕಾಗಿ 189.63 ಕೋಟಿ ರೂ. ಬೆಳೆ ಪರಿಹಾರಕ್ಕಾಗಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದರು.

ಜಿಲ್ಲೆಯಲ್ಲಿ ಸಾಮಾನ್ಯವಾಗಿ ಮುಂಗಾರು ಹಂಗಾಮಿನಲ್ಲಿ 10.86 ಲಕ್ಷ ಮೆ.ಟನ್ ನಷ್ಟು ಮೇವು ಬೆಳೆಯಲಾಗುತ್ತಿತ್ತು, ಆದರೆ ಮಳೆಯ ಕೊರತೆ ಕಾರಣದಿಂದಾಗಿ ಕೇವಲ 3.71 ಲಕ್ಷ ಮೆ.ಟನ್ ನಷ್ಟು ಮಾತ್ರ ಮೇವು ಬೆಳೆಯಲಾಗಿದೆ, ಜಿಲ್ಲೆಗೆ ವರ್ಷಕ್ಕೆ ಜಾನುವಾರುಗಳಿಗಾಗಿ ಕನಿಷ್ಟ 10.59 ಲಕ್ಷ ಮೆ.ಟನ್ ನಷ್ಟು ಮೇವಿನ ಅಗತ್ಯತೆ ಇದೆ, ಬರ ಪರಿಸ್ಥಿತಿಯಿಂದಾಗಿ ಮೇವಿಗೂ ಕೊರತೆ ಉಂಟಾಗುವ ಪರಿಸ್ಥಿತಿ ಬಂದಿದೆ. ಹೀಗಾಗಿ ಗೋಶಾಲೆಗಳನ್ನು ತೆರೆಯಲು ಬೇಕಾದ ಸಿದ್ಧತೆ ಹಾಗೂ ಅಗತ್ಯವಿರುವ ಅನುದಾನದ ಬಗ್ಗೆಯೂ ವರದಿ ಸಲ್ಲಿಸಲಾಗಿದೆ. ಮಳೆಯ ಕೊರತೆ ಕಾರಣ ಈಗಾಗಲೆ ಅಲ್ಲಲ್ಲಿ ಕುಡಿಯುವ ನೀರಿನ ಸಮಸ್ಯೆ ಹಾಗೂ ಅಂತರ್ಜಲ ಕುಸಿತ ಉಂಟಾಗಿದೆ. ಸರ್ಕಾರದಿಂದ ಗ್ರಾಮೀಣ ಪ್ರದೇಶಗಳಲ್ಲಿ ಕೂಲಿಕಾರ್ಮಿಕರಿಗೆ ನರೇಗಾ ಯೋಜನೆಯಡಿ ವರ್ಷಕ್ಕೆ ನೀಡುವ ಉದ್ಯೋಗದ ದಿನಗಳನ್ನು 100 ರಿಂದ 150 ಕ್ಕೆ ಹೆಚ್ಚಿಸಲಾಗಿದ್ದು, ವೈಯಕ್ತಿಕ ಹಾಗೂ ಸಮುದಾಯ ಆಧಾರಿತ ಉದ್ಯೋಗ ನೀಡಿ, ಕೂಲಿಕಾರ್ಮಿಕರ ಹಿತ ಕಾಯಲು ಯೋಜಿಸಲಾಗಿದೆ ಎಂದರು.

ಜಿಲ್ಲೆಯಲ್ಲಿ ಕಳೆದ 20 ವರ್ಷಗಳ ಅವಧಿಯಲ್ಲಿ 16 ವರ್ಷಗಳು ಸರ್ಕಾರದಿಂದ ಘೋಷಿತ ಬರವನ್ನು ಜಿಲ್ಲೆ ಅನುಭವಿಸಿದ್ದು, ರೈತರು ಸಂಕಷ್ಟದ ಪರಿಸ್ಥಿತಿಯನ್ನು ಅನುಭವಿಸಿದ್ದಾರೆ ಎಂಬುದಾಗಿ ಜಿಲ್ಲಾಧಿಕಾರಿ ದಿವ್ಯಪ್ರಭು ಅವರು ಕೇಂದ್ರ ಬರ ಅಧ್ಯಯನ ತಂಡದ ಅಧಿಕಾರಿಗಳಿಗೆ ಜಿಲ್ಲೆಯ ಬರ ಪರಿಸ್ಥಿತಿಯ ವಾಸ್ತವ ಸ್ಥಿತಿಗತಿಯನ್ನು ಮನವರಿಕೆ ಮಾಡಿಕೊಟ್ಟರು.

ಸಭೆಯಲ್ಲಿ ಜಿಲ್ಲೆಯ ಬರ ಅಧ್ಯಯನಕ್ಕಾಗಿ ಆಗಮಿಸಿದ ಕೇಂದ್ರ ಜಲಶಕ್ತಿ ಆಯೋಗದ ನಿರ್ದೇಶಕ ವಿ.ಅಶೋಕ್ ಕುಮಾರ್ ಎಂ.ಎನ್.ಸಿ.ಎಫ್.ಸಿ ಉಪನಿರ್ದೇಶಕ ಕರಣ್ ಚೌಧರಿ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಉಪಕಾರ್ಯದರ್ಶಿ ಸಂಗೀತ್ ಕುಮಾರ್ ಹಾಗೂ ರಾಜ್ಯ ಪ್ರಕೃತಿ ವಿಕೋಪ ನಿರ್ವಹಣಾ ಕೇಂದ್ರದ ಹಿರಿಯ ಸಲಹೆಗಾರ ಡಾ. ಶ್ರೀನಿವಾಸ ರೆಡ್ಡಿ. ಜಿಲ್ಲಾ ಪಂಚಾಯತ್ ಸಿಇಒ ಸೋಮಶೇಖರ್, ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಕಾರ್ತಿಕ್, ಜಂಟಿ ಕೃಷಿ ನಿರ್ದೇಶಕ ಮಂಜುನಾಥ್, ತೋಟಗಾರಿಕೆ ಉಪನಿರ್ದೇಶಕಿ ಸವಿತಾ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

---

# ನಾಯಕನಹಟ್ಟಿ: ಕೇಂದ್ರ ತಂಡ ಬರ ವೀಕ್ಷಣೆ

» ನಾಯಕನಹಟ್ಟಿ

ರಾಜ್ಯದ ಅತ್ಯಂತ ಕಡಿಮೆ ಮಳೆ ಬೀಳುವ ಪ್ರದೇಶ ನಾಯಕನಹಟ್ಟಿ ಹಣೆ ಪಟ್ಟಿ ಬರೆದುಕೊಂಡಿದೆ. ಜಿಲ್ಲೆಯ ಮಳೆಯ ಕೊರತೆಯಿಂದಾಗಿ ಉಂಟಾಗಿರುವ ಬರ ಪರೀಸ್ಥಿತಿಯನ್ನು ಅಧ್ಯಯನ ಮಾಡಿ ಪರಿಶೀಲಿಸಿ ಕೇಂದ್ರ ನೀರು ಆಯೋಗದ ನಿರ್ದೇಶಕ ಅಶೋಕ್‌ಕುಮಾರ್ ಅವರ ನೇತೃತ್ವದ ತಂಡ ಶನಿವಾರ ವಿವಿಧೆಡೆ ರೈತರ ಜಮೀನುಗಳಿಗೆ ಭೇಟಿ ನೀಡಿ ಪರಿಸೀಲಿಸಿದರು. ರೈತರು ಹಾನಿಯಾಗಿರುವ ಶೇಂಗಾ, ಮೆಕ್ಕೆಜೋಳ ಇನ್ನಿತರ ಬೆಳೆಗಳನ್ನು ತಂಡಕ್ಕೆ ತೋರಿಸಿ ವಿವರಿಸಿದರು ಶೇಂಗಾ ಮತ್ತಿತರ ಬೆಳೆಗಳನ್ನು ನೋಡಿದ ತಂಡವು ಈ ಕುರಿತು ಪ್ರಶ್ನಿಸಿದಾಗ ಶೇಂಗಾ ಗಿಡಗಳು ಒಣಗಿ ಹೋಗಿದ್ದು ಬಿತ್ತನೆ ಮಾಡಿದ ವೆಚ್ಚ ವಾಪಾಸ್ಸು ಬರುವುದಿಲ್ಲ ಎಂದು ರೈತರು ಅಧಿಕಾರಿಗಳ ತಂಡಕ್ಕೆ ವಿವರಿಸಿದರು.



ನಾಯಕನಹಟ್ಟಿ ಹೋಬಳಿಯ ನಲಗೇತನಹಟ್ಟಿ ಗ್ರಾಮ ಪಂಚಾಯಿತಿ ರೈತರಿಗೆ ಉದ್ಯೋಗ ಖಾತರಿ ಕೆಲಸವನ್ನು ಮಾಡುತ್ತಿದ್ದಾರೆ ಮಳೆ ಇಲ್ಲದೇ ಸಾಲ, ಸೂಲ ಮಾಡಿ ಬ್ಯಾಂಕ್ ಅಥವಾ ಫೈನಾನ್ಸ್‌ಯಿಂದ, ಸ್ನೇಹಿತರಿಂದ ಶೇಂಗಾ ಬಿತ್ತನೆ ಮಾಡಿದ್ದೇವೆ ಮಳೆ ಇಲ್ಲದೆ ರೈತರು ಮನೆಯಲ್ಲಿ ಕುಳಿತುಕೊಳ್ಳುವ ಪರಿಸ್ಥಿತಿ ಬಂದಿದೆ. ಕೆಲವರು ಸ್ವಾಮಿ ಹೆಚ್ಚಿನ ದಿನಗಳು ಉದ್ಯೋಗ ಖಾತರಿ ಕೆಲಸ ಕೊಡಿ ಎಂದು ಮನವಿ ಮಾಡಿಕೊಂಡರು. ಇದಕ್ಕೆ ಸ್ಪಂದಿಸಿದ ಸಿ.ಎಸ್. ಸೋಮಶೇಖರ್‌ರವರು ಮಾತನಾಡಿ ಇನ್ನು ಹೆಚ್ಚಿನ ದಿನಗಳನ್ನು ಉದ್ಯೋಗ ಖಾತರಿ ಕೆಲಸ ಕೊಡಿಸುತ್ತೇವೆ ಎಂದು ಸ್ಥಳದಲ್ಲಿ ಸ್ಪಷ್ಟನೆ ವಿವರಣೆ ನೀಡಿದರು. ಮಾಹಿತಿ ಸಂಗ್ರಹ ಹಂಚಿಕೊಂಡ ಕೇಂದ್ರ ಬರ ತಂಡ ರೈತರ ಹತ್ತಿರ ಒಂದು ಎಕರೆಗೆ ಸುಮಾರು ಎಷ್ಟು ಖರ್ಚು ಮಾಡಿದ್ದೀರ ಎಂದು ಮಾಹಿತಿ ಸಂಗ್ರಹ ಪಡೆದರು. ಕೆಲವು ರೈತರು ಮಾತನಾಡಿ ಒಂದು ಎಕರೆಗೆ 15–20 ಸಾವಿರ ರೂಪಾಯಿ ಖರ್ಚು ಮಾಡಿದ್ದೇವೆ ಆದರೆ ಇದರಲ್ಲಿ ಒಂದು ಪೈಸೆಯು ಬರುವುದಿಲ್ಲ ಸ್ವಾಮಿ ಎಂದು ಅಂಗಲಾಚಿದರು.

ಮಳೆಯ ಕೊರತೆ ಬೆಳೆ ಹಾನಿಯಾದ ಬಗ್ಗೆ ಬೆಳೆದ ಶೇಂಗಾ ಗಿಡವನ್ನು ತೋರಿಸಿ ಬರದ ಬಗ್ಗೆ ಮಾಹಿತಿ ಹಂಚಿಕೊಂಡರು. ಕೆಲವು ರೈತರು ಮಳೆ ಇಲ್ಲದೆ ಆಳಾಗಿದ್ದ ಬೆಳೆಗಳನ್ನು ತೋರಿಸಿದರು. ರಾಮದುರ್ಗ ಗ್ರಾಮಕ್ಕೆ ತೆರಳಿದ ತಂಡ ಅಲ್ಲಿಯೂ ಬೆಳೆ ಹಾನಿಯಾದ ಬಗ್ಗೆ ರೈತರಿಂದ ಮಾಹಿತಿ ಸಂಗ್ರಹಿಸಿದರು. ಮಳೆಯ ಕೊರತೆಯಿಂದ ಬೆಳೆಗಳು ಹಾಳಾಗಿರುವುದು ಕಂಡು ಬಂದಿದ್ದು ರೈತರಿಗೆ ಯಾವುದೇ ಪ್ರಯೋಜನ ತಂದಿಲ್ಲ ಚಿತ್ರದುರ್ಗ ಜಿಲ್ಲೆಯ ವಿವಿಧ ಹಳ್ಳಿಗಳಿಗೆ ಭೇಟಿ ನೀಡಿದರು. ಚಿತ್ರದುರ್ಗ ಜಿಲ್ಲೆಯ ಐತಿಯಾಸಿಕ ಮದ್ಯ ಕರ್ನಾಟಕದ ಶ್ರೀ ಗುರು ತಿಪ್ಪೇರುದ್ರಸ್ವಾಮಿ ಕಟ್ಟಿಸಿದ ಚಿಕ್ಕಕೆರೆಯನ್ನು ವೀಕ್ಷಿಸಿದರು. ಗೋನೂರು, ಹಾಯ್ಕಲ್, ರಾಮದುರ್ಗ, ಬೋಸೆದೇವರಹಟ್ಟಿ, ದೊರೆಗಳಹಟ್ಟಿ, ಚನ್ನಬಸಯ್ಯನಹಟ್ಟಿ, ಭೀಮಗೊಂಡನಹಳ್ಳಿಯಲ್ಲಿ ಬೆಳೆದ ರೈತರ ಶೇಂಗಾ ಬೆಳೆಯನ್ನು ವೀಕ್ಷಿಸಿ ನೋವು ತುಂಬಿಕೊಂಡರು.

ಜಿಲ್ಲೆಯ ಶೇಂಗಾ, ರಾಗಿ, ತೊಗರಿ ಸೇರಿದಂತೆ ತೋಟಗಾರಿಕೆ ಬೆಳೆಗಳನ್ನು ವೀಕ್ಷಣೆ ಮಾಡಿದರು.

ಈ ಸಂದರ್ಭದಲ್ಲಿ ಉಪಸ್ಥಿತರಾದ ಚಿತ್ರದುರ್ಗ ಜಿಲ್ಲೆಯ ಜಿಲ್ಲಾಧಿಕಾರಿ ದಿವ್ಯಪ್ರಭು, ಸಿ.ಎಸ್.ಸೋಮಶೇಖರ್, ಚಳ್ಳಕೆರೆ ತಹಶೀಲ್ದಾರ್ ರೆಹಮಾನ್ ಪಾಷ, ಆರ್.ಐ. ಚೇತನ್‌ಕುಮಾರ್, ಉಪತಹಶೀಲ್ದಾರ್ ಶಕುಂತಲ ಬಿ. ಕರಣ್‌ಚೌದರಿ, ಜಂಟಿ ಕೃಷಿ ನಿರ್ದೇಶಕ ಮಂಜುನಾಥ್, ಆನಂದ, ಅಶೋಕ್‌ಕುಮಾರ್, ಎ.ಸಿ. ಎಂ. ಕಾರ್ತಿಕ್, ಎ.ಡಿ.ಎ. ಮಂಜುನಾಥ್, ಡಿ.ಡಿ.ಎ. ಶಿವಕುಮಾರ್ ಪ್ರಭಾಕರ್, ಚಳ್ಳಕೆರೆ ಕೃಷಿ ಅಧಿಕಾರಿ ಅಶೋಕ್, ಜೀವನ್ ಪರಶುರಾಂಪುರ ಕೃಷಿ ಅಧಿಕಾರಿ, ಸಂತೋಷ್, ಅಧಿಕಾರಿಗಳು, ಹೇಮಾಲಿ, ನಾಯಕನಹಟ್ಟಿ ಕೃಷಿ ಅಧಿಕಾರಿ ಹೇಮಂತ್‌ನಾಯ್ಕ, ಚಿತ್ರದುರ್ಗ ಜಿಲ್ಲೆ ಕೃಷಿ ಅಧಿಕಾರಿಗಳ ತಂಡ, ನಾಯಕನಹಟ್ಟಿ ಪೊಲೀಸ್ ಅಧಿಕಾರಿಗಳು ಪಿ.ಎಸ್.ಐ. ದೇವರಾಜ್, ಸಿಬ್ಬಂದಿಗಳು, ನೆಲಗೇತನಹಟ್ಟಿ ಮಾಜಿ ಗ್ರಾ.ಪಂ. ಅಧ್ಯಕ್ಷ ಮುತ್ತಯ್ಯ, ನಲಗೇತನಹಟ್ಟಿ ಗ್ರಾಮ ಪಂಚಾಯಿತಿಯ ಸದಸ್ಯರುಗಳು, ಉಪಾಧ್ಯಕ್ಷರು, ರಾಷ್ಟ್ರೀಯ ಇಸಾನ್ ಸಂಘದ ಪ್ರಕಾಶ್, ತಾಲ್ಲೂಕು ಅಧ್ಯಕ್ಷರು ಪಾಲಯ್ಯ, ತಿಪ್ಪೇಸ್ವಾಮಿ ಕಾರ್ಯದರ್ಶಿ, ಮನು, ಓಬಯ್ಯ, ಬೋರಣ್ಣ, ಹಾಗೂ ಇನ್ನಿತರರು ಇದ್ದರು.

---

# ಬೇಡಿಕೆ ಈಡೇರಿಸುವಂತೆ ಸಿಎಂಗೆ ಗೌಸ್‌ಪೀರ್ ಮನವಿ



» ಚಿತ್ರದುರ್ಗ

ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಶುಕ್ರವಾರ ಚಿತ್ರದುರ್ಗಕ್ಕೆ ಆಗಮಿಸಿದ್ದ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಫೆಡರೇಷನ್ ಜಿಲ್ಲಾ ಸಮಿತಿಯಿಂದ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಮನವಿ ಸಲ್ಲಿಸಲಾಯಿತು.

2022–23 ನೇ ಸಾಲಿನ ಶೈಕ್ಷಣಿಕ ಸಹಾಯಧನವನ್ನು ಕೂಡಲೆ ಬಿಡುಗಡೆಗೊಳಿಸಬೇಕು. 1.5 ಲಕ್ಷ ಫಲಾನುಭವಿಗಳಿಗೆ ಬಾಕಿ ಉಳಿಸಿಕೊಂಡಿರುವ ಶೈಕ್ಷಣಿಕ ಧನಸಹಾಯವನ್ನು ಪಾವತಿಸಬೇಕು.

2023–24 ನೇ ಸಾಲಿನ ಶೈಕ್ಷಣಿಕ ವರ್ಷ ಆರಂಭವಾಗಿರುವುದರಿಂದ ಸಹಾಯಧನಕ್ಕಾಗಿ ಅರ್ಜಿ ಆಹ್ವಾನಿಸಬೇಕು. ಲ್ಯಾಪ್‌ಟಾಪ್, ಟ್ಯಾಬ್ ಸೇರಿದಂತೆ ಯಾವುದೇ ವಿಧವಾದ ಖರೀಧಿಗಳನ್ನು ನಿಲ್ಲಿಸಬೇಕು. ಹಿಂದಿನ ಬಿಜೆಪಿ.ಸರ್ಕಾರದ ಅವಧಿಯಲ್ಲಿ ನಡೆದಿರುವ ಎಲ್ಲಾ ಬಗೆಯ ಖರೀಧಿ ಅವ್ಯವಹಾರಗಳನ್ನು ತನಿಖೆಗೆ ಆದೇಶಿಸಿ ಭ್ರಷ್ಟಾಚಾರದಲ್ಲಿ ಭಾಗಿಯಾಗಿರುವವರ ಮೇಲೆ ಕಠಿಣ ಕ್ರಮಕೈಗೊಳ್ಳುವಂತೆ ಕಟ್ಟಡ ಕಾರ್ಮಿಕರ ರಾಜ್ಯ ಉಪಾಧ್ಯಕ್ಷ ಸಿ.ಕೆ.ಗೌಸ್‌ಪೀರ್ ಮುಖ್ಯಮಂತ್ರಿಯವರಲ್ಲಿ ವಿನಂತಿಸಿದರು.

### ಆಕ್ಷೇಪಣೆಗಳಿಗೆ ಅರ್ಜಿ ಆಹ್ವಾನ

**ದಾವಣಗೆರೆ:** ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘದ ವತಿಯಿಂದ ರಾಷ್ಟ್ರೀಯ ಆರೋಗ್ಯ ಅಭಿಯಾನದ ಉಪ ಕಾರ್ಯಕ್ರಮಗಳಡಿ ಪ್ರಸಕ್ತ ಸಾಲಿಗೆ ಮಂಜೂರಾಗಿ ಖಾಲಿ ಇರುವ ವಿವಿಧ ಹುದ್ದೆಗಳಿಗೆ ಜುಲೈ 23 ರಂದು ನೇರ ಸಂದರ್ಶನದಲ್ಲಿ ಆಯ್ಕೆಯಾದವರ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗಿದೆ.

---

## ಪ್ರಮುಖ ಸುದ್ದಿ

# ರೈತರ ಜಮೀನಿನಲ್ಲಿ ಬರ ಅಧ್ಯಯನ ತಂಡದಿಂದ ಬರ ವೀಕ್ಷಣೆ

» ಚಿತ್ರದುರ್ಗ

ಪ್ರಸಕ್ತ ಸಾಲಿನ ಮುಂಗಾರು ಮಳೆ ಕೊರತೆಯಿಂದ ಉಂಟಾಗಿರುವ ಬರ ಪರಿಸ್ಥಿತಿಯ ಅಧ್ಯಯನ ಮಾಡಲು ಕೇಂದ್ರ ಜಲಶಕ್ತಿ ಆಯೋಗದ ನಿರ್ದೇಶಕ ವಿ.ಅಶೋಕ್ ಕುಮಾರ್ ನೇತೃತ್ವದಲ್ಲಿ ಎಂ.ಎನ್.ಸಿ.ಎಫ್.ಸಿ ಉಪನಿರ್ದೇಶಕ ಕರಣ್ ಚೌಧರಿ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಉಪಕಾರ್ಯದರ್ಶಿ ಸಂಗೀತ್ ಕುಮಾರ್ ಹಾಗೂ ರಾಜ್ಯ ಪ್ರಕೃತಿ ವಿಕೋಪ ನಿರ್ವಹಣಾ ಕೇಂದ್ರದ ಹಿರಿಯ ಸಲಹೆಗಾರ ಡಾ. ಶ್ರೀನಿವಾಸ ರೆಡ್ಡಿ ಅವರನ್ನು ಒಳಗೊಂಡ ಕೇಂದ್ರ ಬರ ಅಧ್ಯಯನ ತಂಡ ಶನಿವಾರದಂದು ಚಿತ್ರದುರ್ಗ ಜಿಲ್ಲೆಯ ವಿವಿಧೆಡೆ ರೈತರ ಜಮೀನುಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿ ರೈತರು ಮತ್ತು ಅಧಿಕಾರಿಗಳಿಂದ ಅಗತ್ಯ ಮಾಹಿತಿ ಪಡೆದುಕೊಂಡಿತು.

ಚಿತ್ರದುರ್ಗ ಜಿಲ್ಲೆಯ ಆರು ತಾಲ್ಲೂಕುಗಳು ಬರಪೀಡಿತ ಪ್ರದೇಶ ಎಂದು ರಾಜ್ಯ ಸರ್ಕಾರ ಘೋಷಣೆ ಮಾಡಿದ ಹಿನ್ನಲೆಯಲ್ಲಿ ಜಿಲ್ಲೆಯ ವಿವಿಧ ಸ್ಥಳಗಳಿಗೆ ಭೇಟಿ ನೀಡಿದ ಕೇಂದ್ರ ಬರ ಅಧ್ಯಯನ ತಂಡ, ಬರ ಕುರಿತು ಮಾಹಿತಿ ಪಡೆಯಿತು.



ಕೇಂದ್ರ ಬರ ಅಧ್ಯಯನ ತಂಡವು ಮೊದಲಿಗೆ ಚಿತ್ರದುರ್ಗ ತಾಲ್ಲೂಕಿನ ವಿಜಾಪುರ ಗ್ರಾಮದ ಮಲ್ಲಿಕಾರ್ಜುನಯ್ಯ ಅವರ ಮೆಕ್ಕೆಜೋಳ, ಎಸ್. ಎಂ. ತಿಪ್ಪೇಸ್ವಾಮಿ ಅವರ ಮೆಕ್ಕೆಜೋಳ ಬೆಳೆ ಮತ್ತು ಸೌಭಾಗ್ಯಮ್ಮ ಅವರ ರಾಗಿ ಜಮೀನಿಗೆ ಭೇಟಿ ನೀಡಿ ಬೆಳೆ ವೀಕ್ಷಣೆ ಮಾಡಿದರು. ವಿಜಾಪುರ ಗ್ರಾಮದ ಬೆಳೆ ವೀಕ್ಷಣೆ ನಂತರ ಬಿರಾವರ ಗ್ರಾಮದ ವಿನಯ್, ಪರಮಶಿವಯ್ಯ ಜಮೀನು ಹಾಗೂ ಕುಬೇಂದ್ರ ಹಾಗೂ ಹರೀಶ್ ಬಾಬು ಅವರ ಜಮೀನಿಗೆ ಭೇಟಿ ನೀಡಿ, ಮಳೆ ಕೊರತೆಯಿಂದ ಒಣಗಿದ್ದ ರಾಗಿ ಮತ್ತು ಮೆಕ್ಕೆಜೋಳ ಬೆಳೆ ವೀಕ್ಷಿಸಿದರು.

ಶನಿವಾರದಂದು ಮುಂಜಾನೆಯಿಂದಲೇ ಬರ ಪೀಡಿತ ಪ್ರದೇಶಗಳಿಗೆ ತೆರಳಿ ಪರಿಶೀಲನೆ ನಡೆಸಲು ತೆರಳಿದ ಕೇಂದ್ರ ಅಧ್ಯಯನ ತಂಡ ಮೊದಲಿಗೆ ತಾಲೂಕಿನ ವಿಜಾಪುರ ಗ್ರಾಮದ ಮಲ್ಲಿಕಾರ್ಜುನಯ್ಯ ಅವರ ಮೆಕ್ಕೆಜೋಳ, ಎಸ್.ಎಂ. ತಿಪ್ಪೇಸ್ವಾಮಿ ಅವರ ಮೆಕ್ಕೆಜೋಳ, ಸೌಭಾಗ್ಯಮ್ಮ ಅವರ ರಾಗಿ ಜಮೀನಿಗೆ ಭೇಟಿ ನೀಡಿ ಬೆಳೆ ವೀಕ್ಷಣೆ ಮಾಡಿತು. ರೈತರು ಹಾಗೂ ಅಧಿಕಾರಿಗಳು ಮಳೆಯ ಕೊರತೆಯಿಂದ ಬೆಳೆ ಹಾನಿಯಾದ ಬಗ್ಗೆ, ಬೆಳೆಯ ಪೈರುಗಳನ್ನು ತೋರಿಸಿ, ಬರದ ತೀವ್ರತೆಯ ಬಗ್ಗೆ ಮನವರಿಕೆ ಮಾಡಿಕೊಟ್ಟರು. ಇಲ್ಲಿಗೆ ಸಮೀಪದ ವಿನಯ್ ಅವರ ಮೆಕ್ಕೆಜೋಳ ಹೊಲಕ್ಕೆ ಭೇಟಿ ನೀಡಿದ ತಂಡವು ಮಳೆಯ ಕೊರತೆಯಿಂದ ಒಣಗಿಹೋಗುತ್ತಿರುವ ಮೆಕ್ಕೆಜೋಳ ಪೈರಿನ ವೀಕ್ಷಣೆ ಮಾಡಿತು. ರೈತ ವಿನಯ್ ತನ್ನ 04 ಎಕರೆಯಲ್ಲಿ ಮೆಕ್ಕೆಜೋಳ ಹಾಗೂ ತೊಗರಿ ಮಿಶ್ರ ಬೆಳೆಯಾಗಿ ಬಿತ್ತನೆ ಮಾಡಿದ್ದು, ಕಾಳು ಕಟ್ಟುವ ಸಮಯದಲ್ಲಿ ಮಳೆ ಕೈಕೊಟ್ಟ ಕಾರಣ ಮೆಕ್ಕೆಜೋಳ ಹಾಳಾಗಿರುವುದನ್ನು ಪರಿಶೀಲಿಸಿತು, ರೈತ ತನ್ನ ಬೆಳೆ ಹಾಳಾಗಿರುವ ಬಗ್ಗೆ ಅಧಿಕಾರಿಗಳಲ್ಲಿ ಅಳಲು ತೋಡಿಕೊಂಡರು, ಬಳಿಕ ತಂಡವು ಬೀರಾವರ ಗ್ರಾಮಕ್ಕೆ ಭೇಟಿ ನೀಡಿ ಕೃಷ್ಣಪ್ಪ ಹಾಗೂ ಹರೀಶ್ ಬಾಬು ಅವರ ರಾಗಿ ಹೊಲಕ್ಕೆ ಭೇಟಿ ನೀಡಿತು, ಇಲ್ಲಿ 04 ಎಕರೆಯಲ್ಲಿ ರಾಗಿ, ಮೆಕ್ಕೆಜೋಳ ಬೆಳೆಯನ್ನು ಕಳೆದ ಆಗಸ್ಟ್ ತಿಂಗಳಿನಲ್ಲಿ ಬಿತ್ತಿದ್ದರು, ಮಳೆ ಇಲ್ಲದೆ ತೇವಾಂಶ ಕೊರತೆ ಉಂಟಾಗಿ, ರಾಗಿ ನೆಲಕಚ್ಚಿದೆ. ಇದೇ ಗ್ರಾಮದ ಶಶಾಂಕ್ ರಾಯ್ ಅವರ ರಾಗಿ ಹೊಲಕ್ಕೂ ಕೂಡ ಭೇಟಿ ನೀಡಿದ ತಂಡ, ಇಲ್ಲಿ ಕೂಡ ರಾಗಿ ಬೆಳೆ ಕಾಳುಕಟ್ಟದೆ ಹಾಳಾಗಿರುವುದನ್ನು ಗಮನಿಸಿತು, ಅಲ್ಲದೆ ರೈತರಿಂದ ಹಾನಿಯ ಬಗ್ಗೆ ಮಾಹಿತಿ ಪಡೆದುಕೊಂಡಿತು. ರೈತರು ಮುಂಗಾರು ಮಳೆ ಇಲ್ಲದೆ ಬೆಳೆ ಹಾನಿಯಾದ ಬಗ್ಗೆ ಹಾಗೂ ಉಂಟಾದ ನಷ್ಟದ ಬಗ್ಗೆ ತಮ್ಮ ಅಳಲನ್ನು ತೋಡಿಕೊಂಡು, ಬೆಳೆ ನಷ್ಟ ಪರಿಹಾರಕ್ಕೆ ಮನವಿ ಮಾಡಿದರು. ಬಳಿಕ ಕೇಂದ್ರ ತಂಡವು ಗೋನೂರು ಗ್ರಾಮ ಪಂಚಾಯತಿ ವ್ಯಾಪ್ತಿಯ ಸಾಸಲಹಟ್ಟಿ ಗ್ರಾಮದ ರವಿ ನಾರಾಯಣ್ ಅವರ ಹೊಲಕ್ಕೆ ಭೇಟಿ ನೀಡಿತು. ರೈತ ತನ್ನ 04 ಎಕರೆಯಲ್ಲಿ ಮೆಕ್ಕೆಜೋಳ ಬೆಳೆ ಬಿತ್ತಿದ್ದು, ಬೆಳೆಯ ಪೈರು ಹಸಿರಾಗಿದ್ದರೂ, ಕಾಳು ಕಟ್ಟದೆ ಕೇವಲ ದಂಟು ಇರುವುದನ್ನು ತಂಡವು ವೀಕ್ಷಿಸಿತು. ರೈತ ರವಿ ನಾರಾಯಣ್ ಮಾಹಿತಿ ನೀಡಿ, ಉತ್ತಮ ಮಳೆಯ ನಿರೀಕ್ಷೆಯಲ್ಲಿ ತನ್ನ 04 ಎಕರೆಯಲ್ಲಿ ಮೆಕ್ಕೆಜೋಳ ಬಿತ್ತನೆ ಮಾಡಿದ್ದು, ಮಳೆ ಕೈಕೊಟ್ಟ ಕಾರಣ ಬೆಳೆ ಹಾಳಾಗಿದೆ, ಪ್ರತಿ ಎಕರೆಗೆ ಬೀಜ, ಗೊಬ್ಬರ, ಕೃಷಿ ಚಟುವಟಿಕೆಗಾಗಿ ಸುಮಾರು 15 ರಿಂದ 20 ಸಾವಿರ ರೂ. ಖರ್ಚಾಗಿದೆ, ಉತ್ತಮ ಮಳೆಯಾಗಿದ್ದರೆ, ಎಕರೆಗೆ ಕನಿಷ್ಟ 25 ರಿಂದ 30 ಕ್ವಿಂಟಾಲ್ ಮೆಕ್ಕೆಜೋಳ ಬೆಳೆ ಪಡೆಯುತ್ತಿದ್ದೆ, ಆದರೆ ಮಳೆ ಇಲ್ಲದ ಕಾರಣ ತೀವ್ರ ನಷ್ಟ ಉಂಟಾಗಿದೆ. ಮೇವಿಗೂ ಕೂಡ ಈ ಬೆಳೆ ಬಾರದಂತಾಗಿದೆ ಎಂದರು.

## ಫಾಸ್ಟ್ ನ್ಯೂಸ್

### ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ: ಅರ್ಜಿ

» ಚಿತ್ರದುರ್ಗ

ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ 2023–24ನೇ ಸಾಲಿಗೆ, ವಿಶ್ವಕರ್ಮ, ಉಪ್ಪಾರ, ಅಂಬಿಗ, ಸವಿತಾ, ಮಡಿವಾಳ, ಅಲೆಮಾರಿ ಮತ್ತು ಅರೆ ಅಲೆಮಾರಿ ಸಮುದಾಯ, ಒಕ್ಕಲಿಗ, ಲಿಂಗಾಯುತ, ಕಾಡುಗೊಲ್ಲ, ಹಟ್ಟಿ ಗೊಲ್ಲ, ಮರಾಠ ಮತ್ತು ಇವರ ಉಪ ಸಮುದಾಯಗಳನ್ನು ಹೊರತುಪಡಿಸಿ ಹಿಂದುಳಿದ ವರ್ಗಗಳ ಪ್ರವರ್ಗ–1, 2ಎ, 3ಎ ಮತ್ತು 3ಬಿನಲ್ಲಿ ಉಳಿದ ಸಮುದಾಯಗಳ ಅಭಿವೃದ್ಧಿಗಾಗಿ ವಿವಿಧ ಯೋಜನೆಯಡಿ ಸಾಲ ಸೌಲಭ್ಯಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಸ್ವಯಂ ಉದ್ಯೋಗ ವೈಯಕ್ತಿಕ ಸಾಲ, ಗಂಗಾ ಕಲ್ಯಾಣ ನೀರಾವರಿ, ಅರಿವು–ಶೈಕ್ಷಣಿಕ ಸಾಲ, ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕೆ ಸಾಲ, ಸ್ವಾವಲಂಬಿ ಸಾರಥಿ, ಬ್ಯಾಂಕುಗಳ ಸಹಯೋಗದೊಂದಿಗೆ ಸ್ವಯಂ ಉದ್ಯೋಗ ಸಾಲ. ಸ್ವಾತಂತ್ರ್ಯ ಅಮೃತ ಮಹೋತ್ಸವ ಮುನ್ನಡೆ ಯೋಜನೆಗಳಿಗೆ ಸೇವಾ ಸಿಂಧು ತಂತ್ರಾಂಶದಲ್ಲಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅಕ್ಟೋಬರ್ 31 ಅರ್ಜಿ ಸಲ್ಲಿಸಲು ಕೊನೆಯ ದಿನ.ಯೋಜನೆಗಳ ಸೌಲಭ್ಯ ಪಡೆಯಲು ಇಚ್ಚಿಸುವ ಹಿಂದುಳಿದ ವರ್ಗಗಳ ಅರ್ಜಿದಾರರು ಅರ್ಜಿಗಳನ್ನು ಸೇವಾ ಸಿಂಧು ಪೋರ್ಟಲ್ https://sevasindhu.karnataka.gov.in ಮುಖಾಂತರ ಗ್ರಾಮ ಒನ್, ಬೆಂಗಳೂರು ಒನ್ ಮತ್ತು ಕರ್ನಾಟಕ ಒನ್ ಸೇವಾ ಕೇಂದ್ರಗಳಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ನಿಗಮದ ವೆಬ್‌ಸೈಟ್ www.dbcdc.karnataka.gov.in ಅಥವಾ ದೂರವಾಣಿ ಸಂಖ್ಯೆ 080–22374832, 8050770004, 8050770005 ಅಥವಾ ಜಿಲ್ಲಾ ಕಚೇರಿಯ ದೂರವಾಣಿ ಸಂಖ್ಯೆ 08194–220882 ಗೆ ಸಂಪರ್ಕಿಸಬಹುದು ಜಿಲ್ಲಾ ವ್ಯವಸ್ಥಾಪಕ ಇ. ಸಂಪತ್‌ಕುಮಾರ್ ತಿಳಿಸಿದ್ದಾರೆ.

### ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮದಿಂದ ವಿವಿಧ ಯೋಜನೆಗಳಿಗೆ ಅರ್ಜಿ

» ದಾವಣಗೆರೆ

ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮದಿಂದ ಪ್ರಸಕ್ತ ಸಾಲಿಗೆ ಅರಿವು ಶೈಕ್ಷಣಿಕ ಸಾಲ ಯೋಜನೆ(ಹೊಸದು) (ನವೀಕರಣ), ಗಂಗಾ ಕಲ್ಯಾಣ ನೀರಾವರಿ ಯೋಜನೆ, ಸ್ವಯಂ ಉದ್ಯೋಗ, ನೇರ ಸಾಲ ಮತ್ತು ಸಹಾಯಧನ ಯೋಜನೆ, ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ಶಿಕ್ಷಣ ವ್ಯಾಸಂಗಕ್ಕೆ ಆರ್ಥಿಕ ನೆರವು, ಸ್ವಯಂ ಉದ್ಯೋಗ ಸಾಲ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆಗೆ ಹಿಂದುಳಿದ ವರ್ಗಗಳ ಪ್ರವರ್ಗ–1 ರ ಅರ್ಜಿದಾರರಿಂದ ಅರ್ಜಿ ಆಹ್ವಾನಿಸಲಾಗಿದೆ. ಸಾಲ ಸೌಲಭ್ಯ ಪಡೆಯಲು ನಿಗದಿತ ಅರ್ಜಿ ನಮೂನೆಗಳಲ್ಲಿ ಭರ್ತಿ ಮಾಡಿ ಅಗತ್ಯ ದಾಖಲಾತಿಗಳೊಂದಿಗೆ ನವಂಬರ್ 2 ರೊಳಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ ನಿಯಮಿತ, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಜಿಲ್ಲಾ ಕಚೇರಿ ಅಥವಾ ನಿಗಮದ ವೆಬ್‌ಸೈಟ್ https://ambigaradevelopment.karnataka.gov.inನ್ನು ಸಂಪರ್ಕಿಸಬಹುದು. ಅರ್ಜಿ ನಮೂನೆಯನ್ನು ನಿಗಮದ ವೆಬ್‌ಸೈಟ್‌ನಲ್ಲಿ ಹಾಗೂ ಉಚಿತವಾಗಿ ಜಿಲ್ಲಾ ಕಚೇರಿಯಲ್ಲಿ ಪಡೆಯಬಹುದು. ಜಿಲ್ಲಾ ನಿಗಮದ ಕಚೇರಿ ದೂರವಾಣಿ ಸಂಖ್ಯೆ 08192–230934 ಕ್ಕೆ ಸಂಪರ್ಕಿಸಬಹುದು ಎಂದು ನಿಗಮದ ಜಿಲ್ಲಾ ವ್ಯವಸ್ಥಾಪಕರು ಸಾತ್ವಿಕ್ ತಿಳಿಸಿದ್ದಾರೆ.

### ಕರ್ನಾಟಕ ಸವಿತಾ ಸಮಾಜ ಅಭಿವೃದ್ಧಿ ನಿಗಮದಿಂದ ವಿವಿಧ ಯೋಜನೆಗಳಿಗೆ ಅರ್ಜಿ

» ದಾವಣಗೆರೆ

ಕರ್ನಾಟಕ ಸವಿತಾ ಸಮಾಜ ಅಭಿವೃದ್ಧಿ ನಿಗಮದಿಂದ ಪ್ರಸಕ್ತ ಸಾಲಿಗೆ ವಿವಿಧ ಯೋಜನೆಗಳಿಗೆ ಹಿಂದುಳಿದ ವರ್ಗಗಳ ಪ್ರವರ್ಗ–2ಎ ರಲ್ಲಿನ ಸವಿತಾ ಮತ್ತು ಅದರ ಉಪಜಾತಿಗೆ ಸೇರಿದ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ಸವಿತಾ ಸಮಾಜ ಅಭಿವೃದ್ಧಿ ನಿಗಮ ನಿಯಮಿತ, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಜಿಲ್ಲಾ ಕಚೇರಿ ಅಥವಾ ನಿಗಮದ ವೆಬ್‌ಸೈಟ್ www.kssd.karnataka.gov.inನ್ನು ಸಂಪರ್ಕಿಸಬಹುದು. ಅರ್ಜಿ ನಮೂನೆಯನ್ನು ನಿಗಮದ ವೆಬ್‌ಸೈಟ್‌ನಲ್ಲಿ ಹಾಗೂ ಉಚಿತವಾಗಿ ಜಿಲ್ಲಾ ಕಚೇರಿಯಲ್ಲಿ ಪಡೆಯಬಹುದು. ನಿಗದಿತ ಅರ್ಜಿ ನಮೂನೆಗಳಲ್ಲಿ ಭರ್ತಿ ಮಾಡಿ ಅಗತ್ಯ ದಾಖಲಾತಿಗಳೊಂದಿಗೆ ನವಂಬರ್ 3 ರೊಳಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ನಿಗಮದ ಕಚೇರಿ ದೂರವಾಣಿ ಸಂಖ್ಯೆ 08192–230934 ಕ್ಕೆ ಸಂಪರ್ಕಿಸಬಹುದು ಎಂದು ನಿಗಮದ ಜಿಲ್ಲಾ ವ್ಯವಸ್ಥಾಪಕರು ಸಾತ್ವಿಕ್ ತಿಳಿಸಿದ್ದಾರೆ.

# ತಂಬಾಕು ದಾಳಿ ಹೆಚ್ಚಿಸಿ: ತಹಶೀಲ್ದಾರ್ ಫಾತಿಮಾ

» ಚಿತ್ರದುರ್ಗ

ತಿಂಗಳಿಗೆ ಕೇವಲ ಒಂದೆರೆಡು ತಂಬಾಕು ದಾಳಿಗಳು ಮಾತ್ರ ಆಗುತ್ತಿದ್ದು, ತಂಬಾಕು ದಾಳಿ ಹೆಚ್ಚಿಸಲು ಕ್ರಮಕೈಗೊಳ್ಳಬೇಕು ಎಂದುದ ಹೊಳಲ್ಕೆರೆ ತಹಶೀಲ್ದಾರ್ ಬಿ.ಬಿ.ಫಾತಿಮಾ ಹೇಳಿದರು.

ಹೊಳಲ್ಕೆರೆ ತಹಶೀಲ್ದಾರ್ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ತಾಲ್ಲೂಕುಮಟ್ಟದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು.

ಗ್ರಾಮೀಣ ಮಟ್ಟದಲ್ಲಿ ತಂಬಾಕು ದಾಳಿಗಳನ್ನು ಕೈಗೊಳ್ಳಬೇಕು ಮತ್ತು ಪ್ರತಿ ದಿನ ಕಸ ವಿಲೇವಾರಿ ವಾಹನಗಳಲ್ಲಿ ತಂಬಾಕು ನಿಯಂತ್ರಣ ಕುರಿತಂತೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಆಡಿಯೋ ಜಿಂಗಲ್ಸ್‌ಗಳ ಮೂಲಕ ಸಾರ್ವಜನಿಕರಿಗೆ ತಿಳುವಳಿಕೆ ಮೂಡಿಸುವಂತೆ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ತಿಳಿಸುವಂತೆ ತಾಲ್ಲೂಕು ಕಾರ್ಯನಿರ್ವಾಹಕಾಧಿಕಾರಿಗಳಿಗೆ ತಿಳಿಸಿದರು.



ಶಾಲೆಗಳ ಸುತ್ತ–ಮುತ್ತ 100 ಗಜದ ವ್ಯಾಪ್ತಿಯಲ್ಲಿ ತಂಬಾಕು ದಾಳಿಯನ್ನು ಕೈಗೊಂಡು, ತಂಬಾಕು ಮಾರಾಟ ಮಾಡದಂತೆ, ಯಾವ ಶಾಲೆಗಳ ಹತ್ತಿರ ತಂಬಾಕು ಮಾರಾಟವಾಗುತ್ತಿದೆಯೋ ಅಂತಹ ಶಾಲೆಗಳ ಪಟ್ಟಿಯನ್ನು ಮಾಡಿ, ತಂಬಾಕು ದಾಳಿಯನ್ನು ಕೈಗೊಳ್ಳುವುದು. ಪ್ರತಿಯೊಂದು ಶಾಲೆಗಳ ಹತ್ತಿರ ತಂಬಾಕು ಮಾರಾಟವಾಗದಂತೆ ಮುಖ್ಯೋಪಾಧ್ಯಾಯರು ಸೂಕ್ತ ಕ್ರಮ ವಹಿಸಲು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ತಿಳಿಸಿದರು. ಮುಖ್ಯಾಧಿಕಾರಿಗಳು, ಪುರಸಭೆ ಇವರಿಗೆ ಪ್ರತಿ ದಿನ ಕಸ ವಿಲೇವಾರಿ ವಾಹನಗಳಲ್ಲಿ ತಂಬಾಕು ನಿಯಂತ್ರಣ ಕುರಿತಂತೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಆಡಿಯೋ ಜಿಂಗಲ್ಸ್‌ಗಳ ಮೂಲಕ ಸಾರ್ವಜನಿಕರಿಗೆ ತಿಳುವಳಿಕೆ ಮೂಡಿಸಬೇಕು ಸೂಚನೆ ನೀಡಿದರು.

ತಾಲ್ಲೂಕಿನಾದ್ಯಂತ ತಂಬಾಕು ಕಾರ್ಯಾಚರಣೆ ನಡೆಸುವಾಗ ಪೋಲಿಸ್ ಇಲಾಖೆಯವರು ಹೆಚ್ಚಿನ ಸಹಕಾರ ನೀಡುವಂತೆ ತಹಶೀಲ್ದಾರರು ಸೂಚಿಸಿದರು.ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಟಿ.ಡಿ.ರೇಖಾ ಮಾತನಾಡಿ, ಕೋಟ್ಪಾ–2003 ರ ಅಡಿಯಲ್ಲಿ 2023–24ನೇ ಸಾಲಿನಲ್ಲಿ ಹೊಳಲ್ಕೆರೆ ತಾಲ್ಲೂಕಿನಲ್ಲಿ 08 ತಂಬಾಕು ದಾಳಿಗಳನ್ನು ನಡೆಸಿದ್ದು, ಸೆಕ್ಷನ್–4 ಅಡಿಯಲ್ಲಿ 84 ಕೇಸುಗಳನ್ನು ದಾಖಲಿಸಿ ರೂ. 6900 ದಂಡವನ್ನು, ಸೆಕ್ಷನ್–6ಎ ಅಡಿಯಲ್ಲಿ 44 ಕೇಸುಗಳನ್ನು ದಾಖಲಿಸಿ ರೂ. 3150 ದಂಡವನ್ನು ಮತ್ತು ಸೆಕ್ಷನ್–6ಬಿ ಅಡಿಯಲ್ಲಿ 08 ಕೇಸುಗಳನ್ನು ದಾಖಲಿಸಿ ರೂ. 700 ದಂಡವನ್ನು ಒಟ್ಟು 136 ಕೇಸುಗಳನ್ನು ದಾಖಲಿಸಿ ರೂ. 10,750/– ದಂಡವನ್ನು ಸಂಗ್ರಹಿಸಿ ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಆರೋಗ್ಯ ಮತ್ತು ಕು.ಕ ಅಧಿಕಾರಿಗಳ ಜಂಟಿ ಖಾತೆಗೆ ಕಟ್ಟಿರುವ ಬಗ್ಗೆ ಮಾಹಿತಿಯನ್ನು ಸಭೆಯಲ್ಲಿ ತಿಳಿಸಿದರು.

ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ಸಲಹೆಗಾರ ಬಿ.ಎಂ.ಪ್ರಭುದೇವ್, ತಾಲ್ಲೂಕು ಮಟ್ಟದ ತಂಬಾಕು ತನಿಖಾ ದಳ ತಂಡವು ಕನಿಷ್ಠ ವಾರಕ್ಕೊಮ್ಮೆಯಾದರೂ ತಂಬಾಕು ದಾಳಿಯನ್ನು ನಡೆಸಲು ಮಾನ್ಯ ತಹಶೀಲ್ದಾರವರಲ್ಲಿ ಕೋರಿದರು. ಇದಕ್ಕೆ ತಹಶೀಲ್ದಾರವರು ವಾರಕ್ಕೊಮ್ಮೆ ತನಿಖಾ ತಂಡವು ದಾಳಿ ನಡೆಸಬೇಕೆಂದು ತನಿಖಾ ತಂಡದ ಸದಸ್ಯರಿಗೆ ಸೂಚಿಸಿದರು.

ಸಭೆಯಲ್ಲಿ ಕಂದಾಯ ಇಲಾಖೆಯವರು, ಆರೋಗ್ಯ ಇಲಾಖೆಯವರು, ಪುರಸಭೆಯವರು, ಮಹಿಳಾ ಮತ್ತು ಮಕ್ಕಳ ಇಲಾಖೆ, ಕ್ಷೇತ್ರ ಶಿಕ್ಷಣಾಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ತಾಲ್ಲೂಕು ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ, ರೋಟರಿ ಕ್ಲಬ್, ರೆಡ್ ಕ್ರಾಸ್ ಸಂಸ್ಥೆಯವರು ಇದ್ದರು.

## ಪಿ.ಎಂ.ವಿಶ್ವಕರ್ಮ ಯೋಜನೆ ಸೌಲಭ್ಯ ಪಡೆದುಕೊಳ್ಳಿ

» ಚಿತ್ರದುರ್ಗ

ಕೇಂದ್ರ ಸರ್ಕಾರದ ಹೊಸ ಯೋಜನೆಯಾದ ಪಿ.ಎಂ ವಿಶ್ವಕರ್ಮ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಜಿಲ್ಲೆಯ ಕುಶಲಕರ್ಮಿಗಳು ಇದರ ಸೌಲಭ್ಯ ಪಡೆದುಕೊಳ್ಳಬೇಕು ಎಂದು ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಬಿ. ಆನಂದ್ ತಿಳಿಸಿದರು.

ನಗರದ ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರ ಸಭಾಂಗಣದಲ್ಲಿ ಶುಕ್ರವಾರ ಕೇಂದ್ರ ಸರ್ಕಾರದ ಹೊಸ ಯೋಜನೆಯಾದ ಪಿ.ಎಂ.ವಿಶ್ವಕರ್ಮ ಯೋಜನೆಗೆ ಸಂಬಂಧಿಸಿದಂತೆ ಕುಶಲಕರ್ಮಿಗಳ ಸಂಘದ ಪದಾಧಿಕಾರಿಗಳೊಂದಿಗೆ ಸಭೆ ನಡೆಸಿ, ಅರಿವು ಮೂಡಿಸುವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಪಿ.ಎಂ.ವಿಶ್ವಕರ್ಮ ಯೋಜನೆಗೆ ಸಂಬಂಧಪಟ್ಟಂತೆ ಸಂಘ–ಸಂಸ್ಥೆಗಳ ಪದಾಧಿಕಾರಿಗಳನ್ನು ಆಹ್ವಾನಿಸಿ, ಈ ಯೋಜನೆಯ ಸೌಲಭ್ಯ ಪಡೆಯಲು ಬಡಿಗ ವೃತ್ತಿ ಮಾಡುವವರು, ದೋಣಿ ತಯಾರಿಸುವವರು, ಶಸ್ತ್ರ ತಯಾರಕರು, ಕಮ್ಮಾರ ವೃತ್ತಿ ಮಾಡುವವರು, ಕಲ್ಲುಕುಟಿಗ ವೃತ್ತಿ ಮಾಡುವವರು, ಬಟ್ಟೆ, ಚಾಪೆ–ಕಸ ಪೊರಕೆ ತಯಾರಕರು, ಗೊಂಬೆ ಮತ್ತು ಆಟಿಕೆ ತಯಾರಕರು (ಸಂಪ್ರದಾಯಿಕ) ಕ್ಷೌರಿಕ ವೃತ್ತಿ ಮಾಡುವವರು, ಸುತ್ತಿಗೆ ಮತ್ತು ಉಪಕರಣಗಳನ್ನು ತಯಾರಿಸುವವರು, ಹೂಮಾಲೆ ತಯಾರಕರು, ಅಗಸರು (ದೋಬಿ, ಆಭರಣ ತಯಾರಕರು, ಶಿಂಪಿಗ (ಬಟ್ಟೆ ಹೊಲೆಯುವರು), ಕುಂಬಾರ ವೃತ್ತಿ ಮಾಡುವವರು, ಮೀನು ಬಲೆ ಹೆಣೆಯುವವರು, ಶಿಲ್ಪಿ (ಮೂರ್ತಿ ಮತ್ತು ಕಲ್ಲಿನ ಕೆತ್ತನೆ) ಚಮ್ಮಾರ, ಪಾದರಕ್ಷೆ ತಯಾರಕರು, ಬೀಗ ತಯಾರಿಕ ಕುಶಲಕರ್ಮಿಗಳಿಗೆ ಭಾರತ ಸರ್ಕಾರ ಹೊಸ ಯೋಜನೆಯಾದ ಪಿ.ಎಂ. ವಿಶ್ವಕರ್ಮ ಯೋಜನೆಯಡಿಯಲ್ಲಿ ಹಣಕಾಸು ಸಂಸ್ಥೆಗಳ ಮೂಲಕ ರೂ.1 ಲಕ್ಷದವರೆಗೆ ಶೇ.5 ರ ಬಡ್ಡಿ ದರದಲ್ಲಿ ಸಾಲ ಸೌಲಭ್ಯ ದೊರೆಯುವುದಾಗಿ ಮತ್ತು ರೂ.15 ಸಾವಿರದವರೆಗಿನ ಮೊತ್ತದ ಸುಧಾರಿತ ಉಪಕರಣಗಳನ್ನು ನೀಡಲು ಅವಕಾಶವಿದೆಯೆಂದು ತಿಳಿಸಿದರು.



ಕುಶಲಕರ್ಮಿಗಳು https://pmvishwakarma.gov.in ವೆಬ್‌ಸೈಟ್‌ನಲ್ಲಿ ಸ್ಥಳೀಯ ಸಾಮಾನ್ಯ ಸೇವಾ ಕೇಂದ್ರಗಳ ಮೂಲಕ ನೋಂದಾಯಿಸಿಕೊಂಡು ಯೋಜನೆಯ ಸೌಲಭ್ಯ ಪಡೆದುಕೊಳ್ಳಲು ಎಲ್ಲಾ ಸಂಘ ಸಂಸ್ಥೆಗಳ ಪದಾಧಿಕಾರಿಗಳಿಗೆ ತಿಳಿಸಿದರು.

ಸಭೆಯಲ್ಲಿ ಸವಿತಾ ಸಮಾಜ, ವಿಶ್ವಕರ್ಮ ಸಮಾಜ, ಬಡಗಿತನ ಸಂಘದ, ತರಗಾರ ಸಂಘದ ಅಧ್ಯಕ್ಷರು ಮತ್ತು ಪದಾಧಿಕಾರಿಗಳು ಹಾಗೂ ಇತರೆ ಕುಶಲಕರ್ಮಿಗಳ ಸಂಘದ ಅಧ್ಯಕ್ಷರು ಮತ್ತು ಪದಾಧಿಕಾರಿಗಳು, ಜಿಲ್ಲಾ ಕೈಗಾರಿಕಾ ಕೇಂದ್ರದ ಉಪನಿರ್ದೇಶಕು ಇದ್ದರು.

## ಹೊಳಲ್ಕೆರೆ: ಅಂಗಡಿಗಳಿಗೆ ಭೇಟಿ ನೀಡಿ ಕೋಟ್ಪಾ-2003ರ ಕಾಯ್ದೆಯ ತಂಬಾಕು ಕಾರ್ಯಾಚರಣೆ



ಚಿತ್ರದುರ್ಗ: ಜಿಲ್ಲೆಯಲ್ಲಿ ರಾಷ್ಟ್ರೀಯ ತಂಬಾಕು ನಿಯಂತ್ರಣ ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ ಜಿಲ್ಲಾ ಆರೋಗ್ಯಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್, ಜಿಲ್ಲಾ ತಂಬಾಕು ನಿಯಂತ್ರಣಾಧಿಕಾರಿ ಡಾ.ಚಂದ್ರಶೇಖರ್ ಕಂಬಾಳಿಮಠ ಅವರ ಮಾರ್ಗದರ್ಶನದಲ್ಲಿ ಕೋಟ್ಪಾ–2003ರ ಕಾಯ್ದೆಯ ಕುರಿತು ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ವತಿಯಿಂದ ಶುಕ್ರವಾರ ಹೊಳಲ್ಕೆರೆ ನಗರ ಪ್ರದೇಶಗಳಲ್ಲಿ ಜಿಲ್ಲಾ ಮಟ್ಟದ ತಂಬಾಕು ತನಿಖಾ ತಂಡವು ತಂಬಾಕು ಉತ್ಪನ್ನಗಳ ಮಾರಾಟಗಾರರ ಅಂಗಡಿಗಳಿಗೆ ಭೇಟಿ ನೀಡಿ ದಾಳಿ ನಡೆಸಿತು. ಸಾರ್ವಜನಿಕರಲ್ಲಿ ಮತ್ತು ಅಂಗಡಿ ಮಾಲೀಕರಿಗೆ ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ಮಾಡದಂತೆ, ಪಾನ್ ಮಸಾಲ, ತಂಬಾಕು ಜಗಿದು ಉಗಿಯದಂತೆ ಎಚ್ಚರಿಸಿ ಜಾಗೃತಿ ಮೂಡಿಸಲಾಯಿತು. ಸಂಬಂಧಪಟ್ಟ ಸೆಕ್ಷನ್–4, 6ಎ ಮತ್ತು 6ಬಿ ಬೋರ್ಡ್‌ಗಳನ್ನು ಹಾಕಲು ಸೂಚಿಸಲಾಯಿತು. ಸೆಕ್ಷನ್–4 ಅಡಿಯಲ್ಲಿ 06 ಕೇಸುಗಳನ್ನು ದಾಖಲಿಸಿ ರೂ. 950 ದಂಡ ಮತ್ತು ಸೆಕ್ಷನ್–6ಎ ಅಡಿಯಲ್ಲಿ 03 ಕೇಸುಗಳನ್ನು ದಾಖಲಿಸಿ ರೂ. 350 ದಂಡ ವಸೂಲಿ ಮಾಡಲಾಯಿತು. ತಂಬಾಕು ದಾಳಿಯಲ್ಲಿ ತನಿಖಾ ತಂಡದ ಅಧಿಕಾರಿಗಳಾದ ತಹಶೀಲ್ದಾರ್ ಬಿ.ಬಿ.ಫಾತಿಮಾ, ತಾಲ್ಲೂಕು ಆರೋಗ್ಯಾಧಿಕಾರಿ ಡಾ.ರೇಖಾ, ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ಸಲಹೆಗಾರ ಬಿ.ಎಂ.ಪ್ರಭುದೇವ್, ಪುರಸಭೆ ಮುಖ್ಯಾಧಿಕಾರಿ ವಾಸಿಂ, ಜಿಲ್ಲಾ ಸರ್ವೇಕ್ಷಣ ಘಟಕದ ಡಾಟಾ ಮ್ಯಾನೇಜರ್ ಎಸ್. ಮಧು, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ರಂಗನಾಥ್ ಇದ್ದರು.

## ಎನ್ನೆಸ್ಸೆಸ್ ಅಧಿಕಾರಿ ಬಿ.ಶಾಂತಕುಮಾರಿಗೆ ರಾಜ್ಯಮಟ್ಟದ ಅತ್ಯುತ್ತಮ ಘಟಕ ಪ್ರಶಸ್ತಿ

» ಚಳ್ಳಕೆರೆ



ನಗರದಸರ್ಕಾರಿಪದವಿಪೂರ್ವಕಾಲೇಜಿ ರಾಷ್ಟ್ರೀಯ ಸೇವಾ ಯೋಜನಾಧಿಕಾರಿ ಬಿ.ಶಾಂತಕುಮಾರಿಯವರಿಗೆ 2021–22ನೇ ಸಾಲಿನ ಅತ್ಯುತ್ತಮ ಘಟಕ ಕಾರ್ಯಕ್ರಮಾಧಿಕಾರಿ ಪ್ರಶಸ್ತಿ ಭಾಜನರಾಗಿದ್ದಾರೆಂದು ಪದವಿಪೂರ್ವ ಶಿಕ್ಷಣ ಇಲಾಖೆಯ ನಿರ್ದೇಶಕರ ಪ್ರಕಟಣೆಯಲ್ಲಿ ತಿಳಿಸಲಾಗಿದೆ. ರಾಜ್ಯಮಟ್ಟದಲ್ಲಿ ರಾಷ್ಟ್ರೀಯ ಸೇವಾ ಯೋಜನೆಗಳನ್ನು ಗ್ರಾಮೀಣ ಮಟ್ಟದಲ್ಲಿ ಅತ್ಯಂತ ಯಶಸ್ವಿಯಾಗಿ ನಡೆಸುವುದಲ್ಲದೆ, ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಹಲವಾರು ಜನಪ್ರಿಯ ಯೋಜನೆಗಳನ್ನು ಗ್ರಾಮೀಣ ಭಾಗದ ಜನರಿಗೆ ತಿಳಿಸಿ ಜಾಗೃತಿಗೊಳಿಸಿದ್ದಲ್ಲದೆ, ಅವುಗಳ ಅನುಷ್ಠಾನದಲ್ಲೂ ಸಹ ಪಾರದರ್ಶಕತೆಯನ್ನು ಸಾಬೀತು ಪಡಿಸಿದ ಅವರಿಗೆ ಈ ಪ್ರತಿಷ್ಠಿತ ಪ್ರಶಸ್ತಿ ನೀಡಲಾಗಿದೆ ಎಂದು ಪದವಿ ಪೂರ್ವ ಶಿಕ್ಷಣ ಇಲಾಖೆ ತಿಳಿಸಿದೆ.

ಬೆಂಗಳೂರಿನ ರಾಜಭವನದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಅ.11ರ ಬುಧವಾರ ಬೆಳಗ್ಗೆ 9ಕ್ಕೆ ರಾಜ್ಯಪಾಲರೇ ಈ ಪ್ರಶಸ್ತಿಯನ್ನು ನಿರ್ದೇಶನಾಲಯದ ಪರವಾಗಿ ನೀಡಿ ಗೌರವಿಸುವರು. ನಗರದ ಸರ್ಕಾರಿ ಪದವಿಪೂರ್ವ ಕಾಲೇಜಿನ ರಾಷ್ಟ್ರೀಯ ಸೇವಾ ಯೋಜನಾ ಘಟಕದ ರಾಜ್ಯಮಟ್ಟದ ಪ್ರಶಸ್ತಿ ಪಡೆಯುವುತಿರುವುವರಲ್ಲಿ ಉಪನ್ಯಾಸಕಿ ಬಿ.ಶಾಂತಕುಮಾರಿ ಮೊದಲಿಗರು ಎನ್ನಲಾಗಿದೆ.

ಪ್ರಶಸ್ತಿಗೆ ಭಾಜನರಾದ ಉಪನ್ಯಾಸಕಿ ಬಿ.ಶಾಂತಕುಮಾರಿ ಈ ಹಿಂದೆ ಗಂಗಾವತಿಯ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲೂ ಸಹ ನಾಲ್ಕು ವರ್ಷಗಳ ಕಾಲ ರಾಷ್ಟ್ರೀಯ ಸೇವಾ ಯೋಜನಾ ಅಧಿಕಾರಿಯಾಗಿ ಕಾರ್ಯನಿರ್ವಹಿಸಿದ್ದು, ಕಳೆದ 2019–20ನೇ ಸಾಲಿನಲ್ಲಿ ಚಳ್ಳಕೆರೆ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಎನ್‌ಎಸ್‌ಎಸ್ ಕಾರ್ಯಕ್ರಮಾಧಿಕಾರಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದು, ಇವರ ಅವಧಿಯಲ್ಲಿ ಒಟ್ಟು 04 ರಾಜ್ಯಮಟ್ಟದ ಎನ್‌ಎಸ್‌ಎಸ್‌ಶಿಬಿರ ಅನುಷ್ಠಾನಗೊಳಿಸಿದ್ದಾರೆ.

## ಅರ್ಜಿ ಆಹ್ವಾನ

» ದಾವಣಗೆರೆ

ಕೇಂದ್ರ ಸರ್ಕಾರದ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆಯು ಪ್ರಸಕ್ತ ಸಾಲಿನಲ್ಲಿ ನ್ಯಾಷನಲ್ ಇ–ಸ್ಕಾಲರ್‌ಶಿಪ್ ಪಡೆಯಲು ವಿಕಲಚೇತನ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಪ್ರೀ–ಮೆಟ್ರಿಕ್ ವಿದ್ಯಾರ್ಥಿಗಳು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ನವೆಂಬರ್ 30 ಕೊನೆಯ ದಿನಾಂಕವಾಗಿರುತ್ತದೆ. ಕುಟುಂಬದ ಆದಾಯದ ಮಿತಿ ರೂ. 2.00 ಲಕ್ಷ ನಿಗದಿಪಡಿಸಲಾಗಿದೆ.

**ಪ್ರಮುಖ ಸುದ್ದಿ**

# ದುರ್ಗದ ದೊರೆ ರಾಜವೀರ ಮದಕರಿ ನಾಯಕರ ಹೊಸ ಭಾವಚಿತ್ರ ಲೋಕಾರ್ಪಣೆ ಮಾಡಿದ ನಟ ಕಿಚ್ಚ ಸುದೀಪ್

» ಚಿತ್ರದುರ್ಗ


ನಾಡ ದೊರೆ ಶ್ರೀ ರಾಜವೀರ ಮದಕರಿನಾಯಕ ಅವರ ನೂತನ ಭಾವಚಿತ್ರ ತುಂಬಾ ಸುಂದರವಾಗಿ ಮೂಡಿದ್ದು ನಾನು ಬಿಡುಗಡೆಗೊಳಿಸಿರುವುದು ತುಂಬಾ ಸಂತೋಷ ತಂದಿದೆ ಎಂದು ಚಿತ್ರನಟ ಸುದೀಪ್ ಹೇಳಿದರು.

ಬೆಂಗಳೂರಿನ ಜೆ.ಪಿ.ನಗರದ ಕಿಚ್ಚ ಸುದೀಪ್ ಅವರ ನಿವಾಸದಲ್ಲಿ ಕಿಚ್ಚ ಸುದೀಪ್ ಅವರು ಇಂದು ಬೆಳಗ್ಗೆ 10–30 ಗಂಟೆಗೆ ಖ್ಯಾತ ಚಿತ್ರ ನಟ ಅಭಿನಯ ಚಕ್ರವರ್ತಿ ಕಿಚ್ಚ ಸುದೀಪ್ ಮದಕರಿ ನಾಯಕರ ತಾರುಣ್ಯದ ಭಾವಚಿತ್ರವನ್ನು ಲೋಕಾರ್ಪಣೆ ಮಾಡಿ ಮಾತನಾಡಿದರು.

ಮದಕರಿನಾಯಕ ಅವರ ಭಾವಚಿತ್ರವನ್ನು ಅದ್ಭುತವಾಗಿದೆ. ನೋಡಿ ತುಂಬಾ ಸಂತೋಷವಾಯಿತು. ಮದಕರಿ ಜಯಂತಿ ಉತ್ತಮವಾಗಿ ನಡೆಯಲಿ ಎಲ್ಲಾರಿಗೂ ಶುಭವಾಗಲಿ ಎಂದು ಶುಭ ಹಾರೈಸಿದರು. ನಾಯಕ ಸಮಾಜದ ಬಿ.ಕಾಂತರಾಜ್ ಮಾತನಾಡಿ ನಮ್ಮ ಸಮಾಜದವರಾದ ಚಿತ್ರನಟ ಸುದೀಪ್ ಅವರು ನೂತನ ಮದಕರಿನಾಯಕ ಭಾವಚಿತ್ರ ಬಿಡುಗಡೆಗೊಳಿಸಿರವುದು ನಮಗೆಲ್ಲ ಹರ್ಷ ತಂದಿದೆ. ಅವರು ಕಾರ್ಯಕ್ರಮ ಯಶಸ್ವಿಯಾಗಿ ನಡೆಸಿ ಎಂದು ಪ್ರೋತ್ಸಹಿಸಿದ್ದಾರೆ ಎಂದರು.



ಶ್ರೀ ರಾಜವೀರ ಮದಕರಿನಾಯಕನ ಜಯಂತಿ ಅಂಗವಾಗಿ ಈ ಬಾರಿ ನೂತನವಾದ ಭಾವಚಿತ್ರ ಹೊರ ತರಬೇಕು ಎಂಬ ಉದ್ದೇಶದಿಂದ ಸಮಾಜದ ಅನೇಕ ಮುಖಂಡರ ಜೊತೆ ಚರ್ಚಿಸಿ ನಂತರ ಇತಿಹಾಸಕಾರರು, ಸಾಹಿತಿಗಳು, ಕಲಾವಿದರು, ಸಂಶೋಧಕರಾದ ಬಿ.ಎಲ್. ವೇಣು, ಲಕ್ಷ್ಮಣ ತೆಲಗಾವಿ, ಕಿರಣ್ ಕುಮಾರ್ ಅವರ ಬಳಿ ಅನೇಕ ಬಾರಿ ಚರ್ಚೆ ನಡೆಸಿ ಅವರ ಸಲಹೆ ಪಡೆಯುವ ಮೂಲಕ ಮದಕರಿನಾಯಕರು ವೀರ ಮರಣ ಸಂದರ್ಭದಲ್ಲಿ ಎಷ್ಟು ವರ್ಷ ವಯಸ್ಸು ಆ ಸಂದರ್ಭದಲ್ಲಿ ಅವರು ಭಾವಚಿತ್ರ ಹೇಗಿತ್ತು, ಯಾವೆಲ್ಲ ಆಭರಣಗಳು, ಉಡುಪುಗಳು, ದೇಹದ ಚಿತ್ರಣ ಸಂಪೂರ್ಣ ಮಾಹಿತಿ ಪಡೆದುಕೊಂಡವೆ .ನಂತರ ಚಿತ್ರದುರ್ಗ ನಗರದ ಹೆಸರಾಂತ ಕ್ರಿಯೇಟಿವ್ ವೀರೇಶ್ ಅವರ ಬಳಿ ಚರ್ಚಿಸಿ ಅವರು ಒಪ್ಪಿಕೊಂಡರು.ನಂತರ ಅದನ್ನು ಸತತವಾಗಿ 20 ದಿನಗಳ ಸಮಯದಲ್ಲಿ ರಾಜವೀರ ಮದಕರಿನಾಯಕ ಭಾವಚಿತ್ರವನ್ನು ಅದ್ಭುತವಾಗಿ ಚಿತ್ರಿಸಿಕೊಟ್ಟಿದ್ದಾರೆ. ಇದಕ್ಕೆ ಸಂಶೋಧಕರು ಸಾಕಷ್ಟು ನಿತ್ಯ ಸಲಹೆಗಳು ನೀಡಿರುವವುದಕ್ಕೆ ಅವರಿಗೆ ಮತ್ತು ಚಿತ್ರ ಬರೆದ ಕ್ರಿಯೇಟಿವ್ ವೀರೇಶ್ ಅವರಿಗೆ ನಮ್ಮ ಸಮಾಜದ ಪರವಾಗಿ ಧನ್ಯವಾದಗಳು ಅರ್ಪಿಸುತ್ತನೆ ಎಂದು ತಿಳಿಸಿದರು.



ಈ ಸಂದರ್ಭದಲ್ಲಿ ನಗರಸಭೆ ಸದಸ್ಯ ದೀಪಕ್ , ನಾಯಕ ಸಮಾಜದ ಜಿಲ್ಲಾಧ್ಯಕ್ಷ ಎಚ್.ಜೆ ಕೃಷ್ಣಮೂರ್ತಿ,ಮುಖಂಡರಾದ ಅಂಜಿನಪ್ಪ, ಲಿಂಗನಾಯಕನಹಳ್ಳಿ ತಿಪ್ಪೇಸ್ವಾಮಿ, ಗೋಪಾಲ್ ಸ್ವಾಮಿ ನಾಯಕ್, ತಿಪ್ಪೇಸ್ವಾಮಿ, ಶ್ರೀ ಅಹೋಬಲ ಟಿವಿಸ್ ಮಾಲೀಕ ಅರುಣ್ ಕುಮಾರ್, ದರ್ಶನ್ ಇಂಗಳದಾಳ್, ಬ್ಯಾಂಕ್ ಕಿರಣ್ ಕುಮಾರ್, ಗೀರೀಶ್,ಗುರುನಾಥ್ ಸೇರಿ ಸಮಾಜದ ಮುಖಂಡರು ಭಾಗವಹಿಸಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T